# ಅನಂತ ಜನಶಕ್ತಿ

ಸಂಪಾದಕ: ಎಸ್.ವೆಂಕಟೇಸುಲು
EDITOR : S VENKATESULU

ANANTHA JANA SAKTHI KANNADA DAILY ಕನ್ನಡ ದಿನಪತ್ರಿಕೆ

ಸಂಪುಟ : 01 ಸಂಚಿಕೆ : 47 ರಿ.ನಂ : ಕೆಎನ್‌ಎಎನ್ / 26 / ಎ5487 ಬಳ್ಳಾರಿ ಬುಧವಾರ ದಿನಾಂಕ : 26-08-2026 ಪುಟ : 04 ಬೆಲೆ : 2-00

## ಮೂವರು ಮಕ್ಕಳೊಂದಿಗೆ ತುಂಗಾ ನದಿಗೆ ಹಾರಿದ ಮಹಿಳೆ; ಇಬ್ಬರು ಬಾಲಕಿಯರ ಪತ್ತೆಗೆ ಮುಂದುವರಿದ ಶೋಧ ಕಾರ್ಯ!



ಶಿವಮೊಗ್ಗ: ಕೌಟುಂಬಿಕ ಕಲಹದ ಹಿನ್ನೆಲೆಯಲ್ಲಿ ಮಹಿಳೆಯೊಬ್ಬರು ಇಲ್ಲಿನ ರೈಲ್ವೆ ಸೇತುವೆಯಿಂದ ತಮ್ಮ ಮೂವರು ಮಕ್ಕಳೊಂದಿಗೆ ತುಂಗಾ ನದಿಗೆ ಹಾರಿದ್ದಾರೆ ಎಂದು ಪೊಲೀಸರು ಮಂಗಳವಾರ ತಿಳಿಸಿದ್ದಾರೆ. ಈ ಘಟನೆಯಲ್ಲಿ ನಾಪತ್ತೆಯಾಗಿರುವ ಅವರ ಇಬ್ಬರು ಪುತ್ರಿಯರಿಗಾಗಿ ಶೋಧ ಕಾರ್ಯ ನಡೆಯುತ್ತಿದೆ.

ಈ ಘಟನೆಯು ಸೋಮವಾರ ಸಂಜೆ ಸುಮಾರು 7.30ರ ಸುಮಾರಿಗೆ ನಡೆದಿದೆ ಎಂದು ಅವರು ಮಾಹಿತಿ ನೀಡಿದ್ದಾರೆ. ಸ್ಥಳೀಯ ಯುವಕರು ಮಹಿಳೆ ಮತ್ತು ಆಕೆಯ 11 ತಿಂಗಳ ಮಗನನ್ನು ರಕ್ಷಿಸಿದ್ದಾರೆ. ಆದರೆ, ಆಕೆಯ ಮತ್ತಿಬ್ಬರು ಅಪ್ರಾಪ್ತ ಹೆಣ್ಣುಮಕ್ಕಳು ಇನ್ನೂ ನಾಪತ್ತೆಯಾಗಿದ್ದಾರೆ. ನಾಪತ್ತೆಯಾಗಿರುವ ಮಕ್ಕಳ ವಯಸ್ಸು 6 ಮತ್ತು 4 ವರ್ಷ ಎಂದು ಪೊಲೀಸರು ತಿಳಿಸಿದ್ದಾರೆ.

ಪೊಲೀಸರ ಪ್ರಕಾರ, ಚಿತ್ರದುರ್ಗ ಜಿಲ್ಲೆಯ ಹೊಸೂರು ಗ್ರಾಮದ ನಿವಾಸಿಯಾದ ಭವಾನಿ, ಮೊದಲು ತನ್ನ ಇಬ್ಬರು ಹೆಣ್ಣುಮಕ್ಕಳನ್ನು ನದಿಗೆ ತಳ್ಳಿದ ನಂತರ, ತನ್ನ ಮಗನೊಂದಿಗೆ ತಾನೂ ನದಿಗೆ ಹಾರಿದ್ದಾರೆ. ಮಹಿಳೆ ಮತ್ತು ಆಕೆಯ ಮಗನನ್ನು ತಕ್ಷಣವೇ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಅವರ ಆರೋಗ್ಯ ಸ್ಥಿತಿ ಸ್ಥಿರವಾಗಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

## ಸರ್ಕಾರಿ ಕೆಲಸದಲ್ಲಿ ವಿಳಂಬ ಮಾಡಿದರೆ ಅಧಿಕಾರಿಗಳಿಗೆ ಭಾರಿ ದಂಡ:

# ಸಕಾಲ ಸೇವೆಗಳ ತಿದ್ದುಪಡಿ ಮಸೂದೆ ಪಾಸ್

ಬೆಂಗಳೂರು: ಸರ್ಕಾರಿ ಕೆಲಸ ಅಂದರೆ ದೇವರ ಕೆಲಸ ಅಂತಾರೆ. ಆದರೆ, ಈ ದೇವರ ಕೆಲಸ ಮಾಡಲು ಹಲವು ಅಧಿಕಾರಿಗಳು ಹಿಂದೇಟು ಹಾಕುತ್ತಾರೆ. ಅಂದರೆ, ಸಾರ್ವಜನಿಕರ ಅರ್ಜಿಯನ್ನು ವರ್ಗಾಯಿಸಲು ಅಥವಾ ಕ್ಲಿಯರ್ ಮಾಡಲು ತಡ ಮಾಡುತ್ತಾರೆ. ಹೀಗೆ ತಡ ಮಾಡುವ ಅಧಿಕಾರಿಗಳಿಗೆ ಬಿಸಿ ಮುಟ್ಟಿಸಲು ಮುಂದಾಗಿರುವ ರಾಜ್ಯ ಸರ್ಕಾರ, ಕರ್ನಾಟಕ ಸಕಾಲ ಸೇವೆಗಳ ಕಾಯ್ದೆಗೆ ಮಾಡಲಾದ ತಿದ್ದುಪಡಿ ಮಾಡಿದ್ದು, ಅಂತಹ ಅಧಿಕಾರಿಗಳಿಗೆ ಪ್ರತಿ ಅರ್ಜಿಗೆ 500 ಗಳ ದಂಡ ವಿಧಿಸುವ ಕಾನೂನು ಜಾರಿ ಮಾಡಿದೆ. ಆ ಕುರಿತ ವರದಿ ಇಲ್ಲಿದೆ:

ನಿನ್ನೆ ಅಧಿವೇಶನದ ಕೊನೆಯ ದಿನದಂದು, ಕರ್ನಾಟಕ ವಿಧಾನಸಭೆಯಲ್ಲಿ ಯಾವುದೇ ಚರ್ಚೆಯಿಲ್ಲದೆ ಕೇವಲ 36 ನಿಮಿಷಗಳಲ್ಲಿ 10 ಮಸೂದೆಗಳು ಅಂಗೀಕಾರಗೊಂಡಿವೆ. ಇವುಗಳಲ್ಲಿ, ಕರ್ನಾಟಕ ಸಕಾಲ ಸೇವೆಗಳ (ತಿದ್ದುಪಡಿ) ವಿಧೇಯಕ ಕೂಡ ಒಂದು. ಈ ಮಸೂದೆಯ ಪ್ರಕಾರ, ಸೇವೆ ಒದಗಿಸಲು ವಿಳಂಬ ಮಾಡುವ ಸರ್ಕಾರಿ ನೌಕರರ ಮೇಲೆ ವಿಧಿಸಲಾಗುವ ಒಟ್ಟು ಆರ್ಥಿಕ ಹೊಣೆಗಾರಿಕೆಯನ್ನು ಪ್ರತಿ ಅರ್ಜಿಗೆ ಗರಿಷ್ಠ 500 ಗಳಿಗೆ



ಮಿತಿಗೊಳಿಸಲಾಗಿದೆ. ಇದಲ್ಲದೆ, ಸಕಾಲದ ವ್ಯಾಪ್ತಿಯಲ್ಲಿ ಬರುವ ಮೇಲ್ಮನವಿಗಳು ನ್ಯಾಯಾಲಯದ ದೀರ್ಘ ಪ್ರಕ್ರಿಯೆಗಳಲ್ಲಿ ಸಿಲುಕಿ ನನೆಗುದಿಗೆ ಬೀಳಬಾರದು ಮತ್ತು ಇಲಾಖೆಯ ಒಳಗಡೆಯೇ ತ್ವರಿತವಾಗಿ ಬಗೆಹರಿಯಬೇಕು ಎಂಬ ಉದ್ದೇಶದಿಂದ, ಕಾನೂನುಬದ್ಧವಾಗಿ ಸಕಾಲ ಅಧಿಕಾರಿಗಳಿಗೆ ಸೇರಿದ ವಿಷಯಗಳಲ್ಲಿ ಸಿವಿಲ್ ನ್ಯಾಯಾಲಯಗಳು ಮಧ್ಯಪ್ರವೇಶಿಸುವಂತಿಲ್ಲ ಅಥವಾ ತೀರ್ಪು ನೀಡುವಂತಿಲ್ಲ. ಉಪ-ನೋಂದಣಾಧಿಕಾರಿ ಕಚೇರಿಗೆ ಎರಡೂ ಕಡೆಯವರು ಖುದ್ದಾಗಿ ಹಾಜರಾಗದೆ ಆಸ್ತಿಗಳನ್ನು ನೋಂದಾಯಿಸಲು ಅವಕಾಶ ನೀಡುವ ನೋಂದಣಿ ತಿದ್ದುಪಡಿ ಮಸೂದೆಯನ್ನು ಸಭೆಯಲ್ಲಿ ಅಂಗೀಕರಿಸಲಾಯಿತು. ಈ ಹಿಂದೆ 2024 ರಲ್ಲಿ ತರಲಾಗಿದ್ದ ಇದೇ ರೀತಿಯ ಮಸೂದೆಯನ್ನು ಹಿಂಪಡೆದು, ಹೊಸ ತಿದ್ದುಪಡಿಯೊಂದಿಗೆ ಮಂಡಿಸಲಾಗಿದೆ.



## ಎಥೆನಾಲ್ ಗಣಿತವೇ ಸರಿಯಿಲ್ಲ?

ಬೆಂಗಳೂರು: ಆಹಾರ ಭದ್ರತೆಗಾಗಿ ತೆರಿಗೆದಾರರ ಹಣದಲ್ಲಿ ರೈತರಿಂದ ಭತ್ತ ಖರೀದಿಸಿ, ಅದರ ಸಂಗ್ರಹಣೆ ಮತ್ತು ಸಾಗಣೆ ವೆಚ್ಚವನ್ನೂ ಸರ್ಕಾರವೇ ಭರಿಸಿದ ಬಳಿಕ, ಭಾರತೀಯ ಆಹಾರ ನಿಗಮ ಮೂಲಕ ಎಥೆನಾಲ್ ಉತ್ಪಾದಕರಿಗೆ ಅಕ್ಕಿಯನ್ನು ಸ್ವಾಧೀನ ವೆಚ್ಚಕ್ಕಿಂತ ಸುಮಾರು ಶೇ.40ರಷ್ಟು ಕಡಿಮೆ ದರದಲ್ಲಿ ಮಾರಾಟ ಮಾಡುತ್ತಿರುವ ಕೇಂದ್ರ ಸರ್ಕಾರದ ನೀತಿಯನ್ನು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಪ್ರಶ್ನಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಈ ಕುರಿತು ಪ್ರತಿಕ್ರಿಯಿಸಿರುವ ಅವರು, ಭಾರತದ ಎಥೆನಾಲ್ ಗಣಿತವೇ ಸರಿಯಾಗಿ ಹೊಂದಿಕೆಯಾಗುತ್ತಿಲ್ಲಎಂದು ವ್ಯಂಗ್ಯವಾಡಿದ್ದಾರೆ. ಆಹಾರ ಭದ್ರತೆಗಾಗಿ ರೈತರಿಂದ ಖರೀದಿಸುವ ಭತ್ತಕ್ಕೆ ತೆರಿಗೆದಾರರ ಹಣ ಬಳಕೆ-ಯಾಗುತ್ತದೆ. ಬಳಿಕ ಧಾನ್ಯವನ್ನು ಸಂಗ್ರಹಿಸುವುದು ಹಾಗೂ ಸಾಗಣೆ ಮಾಡುವುದಕ್ಕೂ ಸರ್ಕಾರ ವೆಚ್ಚ ಮಾಡುತ್ತದೆ. ಇಷ್ಟೆಲ್ಲ ಖರ್ಚು ಮಾಡಿದ ನಂತರ ಅದೇ ಅಕ್ಕಿಯನ್ನು ಎಥೆನಾಲ್ ಉತ್ಪಾದಕರಿಗೆ ರಿಯಾಯಿತಿ ದರದಲ್ಲಿ ಮಾರಾಟ ಮಾಡುತ್ತಿರುವುದು ಯಾವ ರೀತಿಯ ಆರ್ಥಿಕ ನೀತಿ ಎಂದು ಅವರು ಪ್ರಶ್ನಿಸಿದ್ದಾರೆ.

## ದುರಾಡಳಿತ-ಭ್ರಷ್ಟಾಚಾರ ಸಹಿಸುವುದಿಲ್ಲ:

### ಲೋಕಾಯುಕ್ತ ನ್ಯಾಯಮೂರ್ತಿ ಪಾಟೀಲ್ ಎಚ್ಚರಿಕೆ



ದಾವಣಗೆರೆ : ಸರ್ಕಾರಿ ಇಲಾಖೆಗಳಲ್ಲಿನ ಕರ್ತವ್ಯಲೋಪ, ನಿರ್ಲಕ್ಷ್ಯ ಹಾಗೂ ದುರಾಡಳಿ, ಲಂಚಗುಳಿತನತವನ್ನು ಲೋಕಾಯುಕ್ತ ಸಂಸ್ಥೆ ಗಂಭೀರವಾಗಿ ಪರಿಗಣಿಸಲಿದೆ ಎಂದು ಲೋಕಾಯುಕ್ತ ನ್ಯಾಯಮೂರ್ತಿ ಬಿ. ಎಸ್. ಪಾಟೀಲ್ ಅವರು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದ್ದಾರೆ.

ದಾವಣಗೆರೆ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ಅಧಿಕಾರಿಗಳೊಂದಿಗೆ ನಡೆದ ಪರಿಶೀಲನಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಭಾನುವಾರ ಮತ್ತು ಸೋಮವಾರ ಜಿಲ್ಲೆಯ ವಿವಿಧ ಹಾಸ್ಟೆಲ್‌ಗಳು ಹಾಗೂ ಕಚೇರಿಗಳಲ್ಲಿ ಕಂಡುಬಂದ ಅವ್ಯವಸ್ಥೆಗಳ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಕಳೆದ ಎರಡು ದಿನಗಳಲ್ಲಿ ಲೋಕಾಯುಕ್ತ ತಂಡ ಜಿಲ್ಲೆಯಾದ್ಯಂತ ಸುಮಾರು 42 ಹಾಸ್ಟೆಲ್‌ಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳು ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ ನಡೆಸಿದ ಅನಿರೀಕ್ಷಿತ ತಪಾಸಣೆಯ ವರದಿಗಳನ್ನು ಸಭೆಯಲ್ಲಿ ಪ್ರಸ್ತಾಪಿಸಲಾಯಿತು.

ಹಾಸ್ಟೆಲ್‌ಗಳಲ್ಲಿ ಅವ್ಯವಸ್ಥೆ ಮತ್ತು ಅತಿಯಾದ ದಟ್ಟಣೆ: ಹೆಚ್.ಕೆ.ಆರ್ ವೃತ್ತದ ಡಾ. ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ನಂತರದ ಬಾಲಕಿಯರ ಹಾಸ್ಟೆಲ್‌ನ ಒಂದೇ ಹಾಸ್ಟೆಲ್‌ನಲ್ಲಿ 37 ವಿದ್ಯಾರ್ಥಿನಿಯರನ್ನು ಇರಿಸಿರುವುದನ್ನು ಪ್ರಶ್ನಿಸಿದ ಅವರು, ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಹೆಚ್ಚುವರಿ ಕಟ್ಟಡಗಳನ್ನು ಬಾಡಿಗೆಗೆ ಪಡೆಯಲು ಸಮಾಜ ಕಲ್ಯಾಣ ಇಲಾಖೆಗೆ ಸೂಚಿಸಿದರು.

ಶಕ್ತಿನಗರದ ಬಾಲಕರ ಹಾಸ್ಟೆಲ್‌ನಲ್ಲಿ 16 ಮೂಟೆ ಗೋಧಿಯನ್ನು 6 ತಿಂಗಳಿನಿಂದ ಬಳಸದೆ ಹುಳು ಹಿಡಿಯುವಂತೆ ಮಾಡಿರುವ ಬಗ್ಗೆ ತನಿಖೆ ನಡೆಸಿ ಪ್ರಕರಣ ದಾಖಲಿಸಲು ಆದೇಶಿಸಿದರು.

## ಸಂಪುಟಕ್ಕೆ ಮತ್ತೆ ಸರ್ಜರಿ? 3-5 ಸಚಿವರಿಗೆ ಕೊಕ್?;

### ಮಹಿಳೆ ಸೇರಿ ಕೆಲ ರೆಬೆಲ್ ನಾಯಕರಿಗೆ ಅವಕಾಶ ಸಾಧ್ಯತೆ

ಬೆಂಗಳೂರು: ವಿಧಾನಮಂಡಲ ಮುಂಗಾರು ಅಧಿವೇಶನಕ್ಕೆ ಮೂರು ದಿನಗಳ ಮೊದಲೇ ಮುಗಿದ ಬೆನ್ನಲ್ಲೇ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ನೇತೃತ್ವದ ಸಚಿವ ಸಂಪುಟದಲ್ಲಿ ಮತ್ತೆ ಭಾರಿ ಬದಲಾವಣೆಯಾಗುವ ಕುರಿತ ಚರ್ಚೆ ಆರಂಭವಾಗಿದೆ.

ಆಗಸ್ಟ್ 13ರಿಂದ ಆಗಸ್ಟ್ 27ರ ವರೆಗೆ ಮುಂಗಾರು ಅಧಿವೇಶನ ನಡೆಸಲು ಆರಂಭದಲ್ಲಿ ತೀರ್ಮಾನಿಸಲಾಗಿತ್ತು. ಆದರೆ ಪ್ರತಿಪಕ್ಷಗಳ ಪ್ರತಿಭಟನೆ ಮತ್ತು ಗದ್ದಲದ ಹಿನ್ನಲೆಯಲ್ಲಿ ಮೂರು ದಿನಗಳ ಮುಂಚಿತವಾಗಿಯೇ ಸೋಮವಾರೇ ವಿಧಾನಸಭೆ ಮತ್ತು ವಿಧಾನ ಪರಿಷತ್ ಕಲಾಪಗಳನ್ನು ಅನಿರ್ದಿಷ್ಟಾವಧಿಗೆ ಮುಂದೂಡಲಾಗಿದೆ.

ಇದರ ಬೆನ್ನಲ್ಲೇ ಸಚಿವ ಸಂಪುಟ ಪುನಾರಚನೆ ಕುರಿತು ಚರ್ಚೆ ಆರಂಭವಾಗಿದ್ದು, ಈ ಬಾರಿ ಮೂರರಿಂದ ಐದು ಸಚಿವರನ್ನು ಸಂಪುಟದಿಂದ



ಕೈಬಿಟ್ಟು, ಹೊಸಬರಿಗೆ ಅವಕಾಶ ನೀಡುವ ಬಗ್ಗೆ ಹೈಕಮಾಂಡ್ ಮಟ್ಟದಲ್ಲಿ ಚರ್ಚೆ ನಡೆದಿದೆ ಎಂದು ಉನ್ನತ ಮೂಲಗಳಿಂದ ತಿಳಿದುಬಂದಿದೆ.

ಈಗಾಗಲೇ ರಾಜ್ಯದ ನಾಯಕರೊಂದಿಗೆ ಹೈಕಮಾಂಡ್ ನಾಯಕರು ಮಾತುಕತೆ ನಡೆಸಿದ್ದು, ಹಿರಿಯ ಸಚಿವರನ್ನು ಸಂಪುಟದಿಂದ ಕೈಬಿಡುವ ಬಗ್ಗೆಯೂ ಚರ್ಚೆ ನಡೆದಿದೆ ಎನ್ನಲಾಗಿದೆ.

ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರಿಗೆ ಹೈಕಮಾಂಡ್ ಬುಲಾವ್ ನೀಡುವ ಸಾಧ್ಯತೆ ಇದ್ದು, ಗುರುವಾರ ಸಿಎಂ ದೆಹಲಿಗೆ ತೆರಳುವ ನಿರೀಕ್ಷೆಯಿದೆ. ಅಂದು ಹೈಕಮಾಂಡ್ ನಾಯಕರೊಂದಿಗೆ ಸಂಪುಟ ಪುನಾರಚನೆ ಕುರಿತು ಚರ್ಚೆ ನಡೆಯುವ ಸಾಧ್ಯತೆ ಇದೆ.

## ಜಮ್ಮು ಮತ್ತು ಕಾಶ್ಮೀರ: 8 ಮಂದಿ ಶಂಕಿತ ಉಗ್ರರ ಬಂಧನ

### ಭದ್ರತಾ ಪಡೆಗಳಿಂದ ಪ್ರತ್ಯೇಕ ಕಾರ್ಯಾಚರಣೆ

ಶ್ರೀನಗರ: ಜಮ್ಮು ಮತ್ತು ಕಾಶ್ಮೀರದ ವಿವಿಧೆಡೆ ಭದ್ರತಾ ಪಡೆಗಳು ನಡೆಸಿದ ಪ್ರತ್ಯೇಕ ಕಾರ್ಯಾಚರಣೆಯಲ್ಲಿ 8 ಮಂದಿ ಶಂಕಿತ ಉಗ್ರರನ್ನು ಬಂಧಿಸಿದ್ದಾರೆ.

ಖಚಿತ ಮಾಹಿತಿ ಮೇರೆಗೆ ಪಿಯಾನ್ ಜಿಲ್ಲೆಯ ಇಮಾಮ್ ಸಾಹಿಬ್‌ನಲ್ಲಿರುವ ಸೇಬಿನ ತೋಟದ ಮೇಲೆ ದಾಳಿ ನಡೆಸಿದ್ದರು. ಶೋಧ ಕಾರ್ಯಾಚರಣೆ ವೇಳೆ ಒಂದು ಗ್ರೆನೇಡ್, ಎರಡು ಮ್ಯಾಗಜಿನ್, ನಾಲ್ಕು ಮೊಬೈಲ್ ಫೋನ್, ನಿಷೇಧಿತ ಸಂಘಟನೆಯ ಪೋಸ್ಟರ್‌ಗಳು ಸಿಕ್ಕಿವೆ.

ಬಂಧಿತರನ್ನು ಆಶೀಕ್ ಹುಸೈನ್ ಕುಮಾರ್, ಆರೀಫ್ ಕುಮಾರ್ ಹಾಗೂ ಹ್ಯಾರಿಸ್ ಮನ್ಸೂರ್ ಎಂದು ಗುರುತಿಸಲಾಗಿದೆ.

ಶೋಪಿಯಾನ್‌ನಲ್ಲಿ ಮೋಟಾರ್ ಬೈಕ್‌ನಲ್ಲಿ ತೆರಳುತ್ತಿದ್ದ ಮೂವರನ್ನು ವಶಕ್ಕೆ ಪಡೆದು ಪರಿಶೀಲನೆ ನಡೆಸಿದ ವೇಳೆ ಎರಡು ಹ್ಯಾಂಡ್ ಗ್ರೆನೇಡ್, ಹಿಜ್ಬುಲ್ ಮುಜಾಹಿದ್ದೀನ್‌ಗೆ ಸೇರಿದ ಕರಪತ್ರಗಳು ಸಿಕ್ಕಿವೆ.

ಬಂಧಿತರನ್ನು ಜುನೈದ್ ಅಹಮ್ಮದ್ ಧರ್, ಅಮೀರ್ ಯೂಸೂಫ್ ಹಾಗೂ ಜುನೈದ್ ಮುಜಾಫರ್ ಎಂದು ಗುರುತಿಸಲಾಗಿದೆ.

ಪುಲ್ವಾಮಾ ಅರಣ್ಯ ಪ್ರದೇಶದಲ್ಲಿ ನಡೆಸಿದ ಮತ್ತೊಂದು ಕಾರ್ಯಾಚರಣೆಯಲ್ಲಿ ಲತೀಫ್ ಅಹಮ್ಮದ್ ಹಾಗೂ ಏಜಾಜ್ ಅಹ್ಮದ್‌ನನ್ನು ಬಂಧಿಸಲಾಗಿದೆ.

ಆರೋಪಿಗಳ ವಿರುದ್ಧ ಶಸ್ತ್ರಾಸ್ತ್ರ ಕಾಯ್ದೆ, ಕಾನೂನುಬಾಹಿರ ಚಟುವಟಿಕೆಗಳ ತಡೆ ಕಾಯ್ದೆಯ ಅಡಿಯಲ್ಲಿ ಪ್ರಕರಣ ದಾಖಲಿಸಿ, ತನಿಖೆ ಮುಂದುವರಿಸಲಾಗಿದೆ

## ಬೀದಿ ಬದಿ ವ್ಯಾಪಾರ ತೆರವುಗೊಳಿಸುವಂತೆ

### ಸುಪ್ರಿಂ ಕೋರ್ಟ್ ಆದೇಶ ಮಾಡಿಲ್ಲ

ಬೆಂಗಳೂರು: ಯಾವುದೇ ಬೀದಿ ಬದಿ ವ್ಯಾಪಾರಸ್ಥರನ್ನು ತೆರವುಗೊಳಿಸಲು ಸುಪ್ರಿಂ ಕೋರ್ಟ್ ಆದೇಶಿಸಿಲ್ಲ. ಬೀದಿ ಬದಿ ವ್ಯಾಪಾರಸ್ಥರ ಬದುಕುವ ಹಕ್ಕು ಮತ್ತು ಹಿತರಕ್ಷಣಾ ಕಾಯ್ದೆಯ ನಿಯಮವನ್ನು ರಾಜ್ಯ ಸರಕಾರ ಪಾಲಿಸಬೇಕು. ಆ ಕಾಯ್ದೆಯ ವಿರುದ್ಧ ಯಾವುದೇ ವ್ಯಾಪಾರಸ್ಥರನ್ನು ಅಕ್ರಮವಾಗಿ ತೆರವುಗೊಳಿಸುವಂತಿಲ್ಲ. ಏಕಾಏಕಿ ವ್ಯಾಪಾರಸ್ಥರನ್ನು ತೆರವುಗೊಳಿಸಿ ಎಂಬ ವ್ಯಾಖ್ಯಾನವನ್ನು ತೀರ್ಪಿನಲ್ಲಿ ಸುಪ್ರೀಂಕೋರ್ಟ್ ಮಾಡಿಲ್ಲ ಎಂದು ಹೈಕೋರ್ಟ್ ಸ್ಪಷ್ಟವಾಗಿ ರಾಜ್ಯ ಸರ್ಕಾರಕ್ಕೆ ಹೇಳಿದೆ. ಭೌಗೋಳಿಕನಕ್ಷೆಗಳು ಮತ್ತು ವಿವರಗಳನ್ನು ಅನ್ವೇಷಿಸುವುದು ದ.ಕ. ಜಿಲ್ಲಾ ಬೀದಿ ಬದಿ ವ್ಯಾಪಾರಸ್ಥರ ಸಂಘದ ಪರವಾಗಿ ಹಿರಿಯ ವಕೀಲ ಎಸ್ ಬಾಲನ್ ಹೈಕೋರ್ಟ್ ಗೆ ಅರ್ಜಿ ಸಲ್ಲಿಸಿದ್ದರು. ದ.ಕ. ಜಿಲ್ಲಾ ಬೀದಿ ಬದಿ ವ್ಯಾಪಾರಸ್ಥರ ಸಂಘದ ಕಾರ್ಯಾಧ್ಯಕ್ಷ ಬಿ.ಕೆ. ಇಮ್ತಿಯಾಝ್ ಮತ್ತು ಇತರರ ಮೇಲೆ ಮಂಗಳೂರು ಮಹಾನಗರ ಪಾಲಿಕೆ ಅಧಿಕಾರಿಗಳು ಹೂಡಿದ್ದ ಪ್ರಕರಣಕ್ಕೆ ಹೈಕೋರ್ಟ್ ತಡೆಯಾಜ್ಞೆ ಕೋರಿದ ಅರ್ಜಿಯ ವಿಚಾರಣೆ ಇಂದು ನಡೆಯಿತು. ವ್ಯಾಪಾರಿಗಳನ್ನು ತೆರವುಗೊಳಿಸುವ ಕಾರ್ಯಾಚರಣೆಯನ್ನು ಮಹಾನಗರ ಪಾಲಿಕೆ ನಡೆಸುತ್ತಿತ್ತು.

## ಕೆಪಿಎಸ್‌ಸಿ ಅಧ್ಯಕ್ಷ ಸ್ಥಾನದಿಂದ

### ಶಿವಶಂಕರಪ್ಪ ಸಾಹುಕಾರ ಅಮಾನತು



ಬೆಂಗಳೂರು: ರಾಜ್ಯ ಸಚಿವ ಸಂಪುಟ ಮಾಡಿರುವ ಶಿಫಾರಸು ಪರಿಗಣಿಸಿ ಕೆಪಿಎಸ್‌ಸಿ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ ಅವರನ್ನು ರಾಜ್ಯಪಾಲ ಥಾವರಚಂದ್ ಗೆಹಲೋತ್ ಅಮಾನತು ಮಾಡಿ ಮಂಗಳವಾರ ಆದೇಶ ಹೊರಡಿಸಿದ್ದಾರೆ.

ಪುತ್ರಿಗೆ ಸರ್ಕಾರಿ ಹುದ್ದೆ ಗಿಟ್ಟಿಸಿಕೊಳ್ಳಲು ಅಧಿಕಾರ ದುರುಪಯೋಗ, ಸ್ವಜನ ಪಕ್ಷಪಾತ ಎಸಗಿರುವ ಆರೋಪ ಎದುರಿಸುತ್ತಿರುವ ಕೆಪಿಎಸ್‌ಸಿ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ ಅವರನ್ನು ಅಮಾನತು ಮಾಡುವಂತೆ ರಾಜ್ಯಪಾಲರಿಗೆ ಇದೇ 21ರಂದು ನಡೆದಿದ್ದ ಸಚಿವ ಸಂಪುಟ ಸಭೆಯು ಶಿಫಾರಸು ಮಾಡಿತ್ತು. ಪುತ್ರಿಗೆ ಅಕ್ರಮವಾಗಿ ಸರ್ಕಾರಿ ಕೆಲಸಕ್ಕೆ ಸೇರಲು ಸಹಕರಿಸಿದ್ದಾರೆಂದು ದೂರುಗಳು ಬಂದ ಕಾರಣ ಸಾಹುಕಾರ ಅವರನ್ನು ಕೆಪಿಎಸ್‌ಸಿ ಅಧ್ಯಕ್ಷ ಸ್ಥಾನದಿಂದ ಜುಲೈ 10ರಂದು ರಾಜ್ಯಪಾಲರು ಅಮಾನತುಗೊಳಿಸಿದ್ದರು.

# 55 ಮನೆಗಳ ನಿರ್ಮಾಣಕ್ಕೆ ಭೂಮಿಪೂಜೆ



ಕೂಡ್ಲಿಗಿ: ಬಡ ಹಾಗೂ ವಸತಿ ರಹಿತ ಕುಟುಂಬಗಳಿಗೆ ಸ್ವಂತ ಸೂರು ಕಲ್ಪಿಸುವ ಉದ್ದೇಶದಿಂದ ಕರ್ನಾಟಕ ಸರ್ಕಾರದ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರ ಆಶಯದ 'ಬುದ್ಧ-ಬಸವ-ಅಂಬೇಡ್ಕರ್ ವಸತಿ ಯೋಜನೆ'ಯಡಿ ನರಸಿಂಹಗಿರಿ ಗ್ರಾಮದಲ್ಲಿ 55 ಮನೆಗಳ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಲಾಯಿತು. ಕೂಡ್ಲಿಗಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ನರಸಿಂಹಗಿರಿ ಗ್ರಾಮದಲ್ಲಿ ಸುಮಾರು ಎರಡೂವರೆ ಎಕರೆ ಪ್ರದೇಶದಲ್ಲಿ ವಸತಿ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಲಾಗಿದ್ದು, ಶಾಸಕ ಡಾ. ಶ್ರೀನಿವಾಸ್ ಎನ್.ಟಿ. ಅವರು ಭೂಮಿಪೂಜೆ ನೆರವೇರಿಸಿದರು.

ಯೋಜನೆಯಡಿ ವಸತಿ ರಹಿತ ಹಾಗೂ ಅರ್ಹ ಕುಟುಂಬಗಳಿಗೆ ಸ್ವಂತ ಮನೆಗಳನ್ನು ನಿರ್ಮಿಸಿಕೊಡುವ ಮಹತ್ವದ ಕಾರ್ಯ ಕೈಗೊಳ್ಳಲಾಗಿದೆ. ಇದರಿಂದ 55 ಕುಟುಂಬಗಳ ಬಹುದಿನಗಳ ಸ್ವಂತ ಸೂರು ಹೊಂದುವ ಕನಸಿಗೆ ಹೊಸ ಭರವಸೆ ದೊರೆತಂತಾಗಿದೆ.

ಸಾಮಾಜಿಕ ನ್ಯಾಯ ಹಾಗೂ ಸಮಾನತೆಯ ಆಶಯದೊಂದಿಗೆ ರೂಪಿಸಿರುವ ಈ ವಸತಿ ಯೋಜನೆಯು ಬಡ ಕುಟುಂಬಗಳಿಗೆ ಸುರಕ್ಷಿತ ಹಾಗೂ ಶಾಶ್ವತ ಸೂರು ಒದಗಿಸುವುದರ ಜೊತೆಗೆ ನರಸಿಂಹಗಿರಿ ಗ್ರಾಮದ ಅಭಿವೃದ್ಧಿಗೂ ಮತ್ತಷ್ಟು ವೇಗ ನೀಡಲಿದೆ ಎಂದು ತಿಳಿಸಲಾಯಿತು.

ಈ ಸಂದರ್ಭದಲ್ಲಿ ಸಮಾಜ ಸೇವಕರಾದ ಎನ್.ಟಿ. ತಮ್ಮಣ್ಣ, ಹುಬ್ಬಳ್ಳಿ ವೆಂಕಟೇಶ್ ಸೇರಿದಂತೆ ಹಲವು ಮುಖಂಡರು, ಗಣ್ಯರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಚುಟುಕು ಸಾಹಿತ್ಯದಲ್ಲಿ ಜೀವನದ ಸಾರ ದೊಡ್ಡದು: ಚನ್ನಮಲ್ಲಸ್ವಾಮಿ



ಕನಕಗಿರಿ: ಚುಟುಕು ಸಾಹಿತ್ಯ ಚಿಕ್ಕದಾಗಿದ್ದರೂ ಅದರಲ್ಲಿರುವ ಜೀವನದ ಸಾರ ದೊಡ್ಡದು. ಜನರ ಮನಸ್ಸನ್ನು ಪರಿವರ್ತಿಸುವ ಶಕ್ತಿ ಚುಟುಕು ಸಾಹಿತ್ಯಕ್ಕಿದೆ ಎಂದು ಸುವರ್ಣಗಿರಿ ಸಂಸ್ಥಾನ ವಿರಕ್ತ ಮಠದ ಚನ್ನಮಲ್ಲಸ್ವಾಮಿ ಹೇಳಿದರು.

ಪಟ್ಟಣದ ಪಂಪಣ್ಣ ಶರಣಪ್ಪ ಗುಗ್ಗಳಶೆಟ್ಟಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಚುಟುಕು ಸಾಹಿತ್ಯ ಪರಿಷತ್ತಿನ ತಾಲೂಕು ಘಟಕದ ವತಿಯಿಂದ ಆಯೋಜಿಸಿದ್ದ ಪದಾಧಿಕಾರಿಗಳ ಪದಗ್ರಹಣ ಹಾಗೂ ಚುಟುಕು ಕವಿಗೋಷ್ಠಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕನ್ನಡ ಸಾಹಿತ್ಯದ ಉಳಿವು ಮತ್ತು ಬೆಳವಣಿಗೆಗೆ ಚುಟುಕು, ಹೈಕು ಸೇರಿದಂತೆ ವಿವಿಧ ಸಾಹಿತ್ಯ ಪ್ರಕಾರಗಳಿಗೆ ಹೆಚ್ಚಿನ ಪ್ರೋತ್ಸಾಹ ನೀಡಬೇಕು. ಚುಟುಕು ಸಾಹಿತ್ಯ ಕೇವಲ ನಗೆ ಮೂಡಿಸುವುದಕ್ಕೆ ಸೀಮಿತವಾಗದೆ, ಓದುಗರನ್ನು ಚಿಂತನೆಗೆ ಹಚ್ಚುವ ಕೆಲಸ ಮಾಡುತ್ತದೆ ಎಂದು ಹೇಳಿದರು.

ಚುಸಾಪ ಜಿಲ್ಲಾಧ್ಯಕ್ಷ ರುದ್ರಪ್ಪ ಭಂಡಾರಿ ಮಾತನಾಡಿ, ಚುಟುಕು ಸಾಹಿತ್ಯ ಸಮಾಜಕ್ಕೆ ಕನ್ನಡಿ ಹಿಡಿಯುವ ಕೆಲಸ ಮಾಡುತ್ತದೆ. ಇಂದಿನ ಯುವ ಪೀಳಿಗೆ ಮೊಬೈಲ್ ಬಳಕೆಯಲ್ಲಿ ಹೆಚ್ಚಿನ ಸಮಯ ಕಳೆಯುತ್ತಿದೆ. ಯುವಜನರಲ್ಲಿ ಕನ್ನಡ ಸಾಹಿತ್ಯದ ಆಸಕ್ತಿ ಬೆಳೆಸಲು ಚುಟುಕು ಸಾಹಿತ್ಯವನ್ನು ಹೆಚ್ಚು ಪರಿಚಯಿಸಬೇಕು. ಕನ್ನಡ ಸಾಹಿತ್ಯದ ಬೆಳವಣಿಗೆಗೆ ಸರ್ಕಾರ ಇನ್ನಷ್ಟು ಪ್ರೋತ್ಸಾಹ ನೀಡಬೇಕು ಎಂದು ಆಗ್ರಹಿಸಿದರು.

ತಾಲೂಕು ನೌಕರರ ಸಂಘದ ಅಧ್ಯಕ್ಷೆ ಶಂಶಾದ್ ಬೇಗಂ ಮಾತನಾಡಿ, ಚುಟುಕು ಕೇವಲ ನಾಲ್ಕು ಸಾಲುಗಳಲ್ಲಿದ್ದರೂ ಸಾವಿರಾರು ಅರ್ಥಗಳನ್ನು ಒಳಗೊಂಡಿರುತ್ತದೆ. ಕಡಿಮೆ ಪದಗಳಲ್ಲಿ ಪರಿಣಾಮಕಾರಿ ಸಂದೇಶ ನೀಡುವ ಸಾಮರ್ಥ್ಯ ಚುಟುಕು ಸಾಹಿತ್ಯಕ್ಕಿದೆ ಎಂದರು.

ಚುಸಾಪ ಗೌರವಾಧ್ಯಕ್ಷ ದುರ್ಗಾದಾಸ ಯಾದವ, ತಾಲೂಕು ಅಧ್ಯಕ್ಷ ಶರಣಪ್ಪ ಮರಾಠಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ನಿರ್ದೇಶಕ ವೆಂಕಟೇಶ ಕುಲಕರ್ಣಿ, ಕಾಲೇಜು ಪ್ರಭಾರ ಪ್ರಾಂಶುಪಾಲ ಬಜರಂಗಬಲಿ, ಶೇಖರಗೌಡ ಮಾಲಿಪಾಟೀಲ, ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ವಾಗೇಶ ಹಿರೇಮಠ, ಉಪನ್ಯಾಸಕಿ ಗೀತಾ ಪಾಟೀಲ, ಪತ್ರಕರ್ತ ಸೋಮಶೇಖರಯ್ಯ, ಪಟ್ಟಣ ಪಂಚಾಯಿತಿ ಸದಸ್ಯ ಶೇಷಪ್ಪ ಪೂಜಾರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಶಿಕ್ಷಕ ವೆಂಕೋಬ ಪೂಜಾರ ಪ್ರಾರ್ಥಿಸಿದರು. ಪತ್ರಕರ್ತ ಮಹಿಬೂಬ ಗಂಗಾವತಿ ಸ್ವಾಗತಿಸಿದರು. ಶಿಕ್ಷಕ ಗೌಸ್ ಕಾರ್ಯಕ್ರಮ ನಿರೂಪಿಸಿದರು.

# ವಚನ ಸಾಹಿತ್ಯ ರಚನೆ ಸುಲಭವಲ್ಲ: ಜಿ.ಎಸ್. ಗೋನಾಳ

ಕುಕನೂರು: ಪ್ರಸ್ತುತ ದಿನಗಳಲ್ಲಿ ಬುದ್ಧ, ಬಸವ ಹಾಗೂ ಅಂಬೇಡ್ಕರ್ ಅವರ ವಿಚಾರಧಾರೆಗಳನ್ನು ಅರಿತುಕೊಂಡು, ಅವುಗಳನ್ನು ಬರಹಗಳ ಮೂಲಕ ಜನರಲ್ಲಿ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದು ಅಖಿಲ ಭಾರತ ವಚನ ಸಾಹಿತ್ಯ ಮತ್ತು ಸಾಂಸ್ಕೃತಿಕ ಪರಿಷತ್ ಜಿಲ್ಲಾ ಅಧ್ಯಕ್ಷ ಜಿ.ಎಸ್. ಗೋನಾಳ ಹೇಳಿದರು.

ಕುಕನೂರಿನ ಅನ್ನದಾನೇಶ್ವರ ಶಾಖಾಮಠದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಾಹಿತಿ ಉಪ್ಪಿನ ಅವರ 'ಭಾವ ಬಯಲು' ಚೊಚ್ಚಲ ಕೃತಿಯನ್ನು ಬಿಡುಗಡೆಗೊಳಿಸಿ ಅವರು ಮಾತನಾಡಿದರು.

ಸಾಹಿತ್ಯ ರಚನೆ ಸುಲಭವೆಂದು ಹಲವರು ಭಾವಿಸುತ್ತಾರೆ. ಆದರೆ ವಚನ ಸಾಹಿತ್ಯ ರಚನೆ ಸುಲಭದ ಕೆಲಸವಲ್ಲ. ವಚನಕಾರರು ತಮ್ಮ ಜೀವನಾನುಭವ, ಸಾಮಾಜಿಕ ಕಾಳಜಿ ಹಾಗೂ ಮೌಲ್ಯಗಳನ್ನು ಸರಳವಾದ ಭಾಷೆಯಲ್ಲಿ ಪರಿಣಾಮಕಾರಿಯಾಗಿ ಕಟ್ಟಿಕೊಡುತ್ತಾರೆ.

ಈ ಹಿನ್ನೆಲೆಯಲ್ಲಿ ಉಪ್ಪಿನ ಅವರು ಬಸವಾದಿ ಶರಣರ ಆದರ್ಶ ಗುಣಗಳನ್ನು ಮೈಗೂಡಿಸಿಕೊಂಡು ಉತ್ತಮ ಕೃತಿ ರಚಿಸಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.



'ಭಾವ ಬಯಲು' ಕೃತಿ ಈಗಾಗಲೇ ಓದುಗರ ಹಾಗೂ ಸಾಹಿತ್ಯಾಸಕ್ತರ ಮೆಚ್ಚುಗೆಗೆ ಪಾತ್ರವಾಗಿದ್ದು, ಮುಂದಿನ ದಿನಗಳಲ್ಲಿ ಈ ಕೃತಿ ಪಠ್ಯಕ್ರಮದ ಭಾಗವಾಗಿ ಹೊರಹೊಮ್ಮಲಿ ಎಂದು ಜಿ.ಎಸ್. ಗೋನಾಳ ಆಶಿಸಿದರು.

ಕಾರ್ಯಕ್ರಮದಲ್ಲಿ ಅನ್ನದಾನೇಶ್ವರ ಶಾಖಾಮಠದ ಮಹದೇವ ಸ್ವಾಮೀಜಿ, ಎಂ.ಎಸ್. ಹಿರೇಮಠ, ಸಾಹಿತಿ ಕೆ.ಬಿ. ಬ್ಯಾಳಿ, ಭೋಜರಾಜ ಸೊಪ್ಪಿಮಠ, ರುದ್ರಪ್ಪ ಭಂಡಾರಿ, ಮಹೇಶ ಸಬರದ, ಉಮೇಶ ಕಂಬಳಿ, ಮಾರುತೇಶ ತಳವಾರ, ಕಳಕಪ್ಪ ಕುಂಬಾರ, ಆರ್.ಪಿ. ರಾಜೂರ, ಶರಣಪ್ಪ ಸೇರಿದಂತೆ ಸಾಹಿತ್ಯಾಸಕ್ತರು ಹಾಗೂ ಗಣ್ಯರು ಉಪಸ್ಥಿತರಿದ್ದರು.

# ಕುರುಗೋಡು, ಸಂಡೂರು ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಬಿರುಸಿನ ಮಳೆ



ಕುರುಗೋಡು/ಸಂಡೂರು: ಕುರುಗೋಡು ಹಾಗೂ ಸಂಡೂರು ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಸೋಮವಾರ ಬಿರುಸಿನ ಮಳೆಯಾಗಿದ್ದು, ಕೆಲವೆಡೆ ರಸ್ತೆಗಳ ಮೇಲೆ ಮಳೆ ನೀರು ಹರಿದಿದೆ.

ಕುರುಗೋಡು ತಾಲ್ಲೂಕಿನ ಸಿಂಧಿಗೇರಿ ಗ್ರಾಮದಲ್ಲಿ ಮಧ್ಯಾಹ್ನ ಬಿರುಸಿನಿಂದ ಕೂಡಿದ ಮಳೆ ಸುರಿಯಿತು. ನಿರಂತರವಾಗಿ ಸುರಿದ ಮಳೆಯಿಂದ ರಸ್ತೆಗಳ ಮೇಲೆ ನೀರು ಹರಿಯಿತು. ಕುರುಗೋಡು ಪಟ್ಟಣ ಸೇರಿದಂತೆ ಎಚ್.ವೀರಾಪುರ, ಬಾದನಹಟ್ಟಿ, ಕಲ್ಲುಕಂಭ, ಬೈಲೂರು, ದಮ್ಮೂರು, ಏಳುಬೆಂಚಿ, ತಿಮ್ಮಲಾಪುರ, ಗೆಣಿಕೆಹಾಳು, ಕೋಳೂರು ಹಾಗೂ ಸೋಮಸಮುದ್ರ ಗ್ರಾಮಗಳಲ್ಲಿಯೂ ಸಾಧಾರಣ ಮಳೆಯಾಗಿದೆ.

ಸಂಡೂರು ಪಟ್ಟಣ ಸೇರಿದಂತೆ ಸಿದ್ದಾಪುರ, ಜೈಸಿಂಗಪುರ, ಸುಶೀಲನಗರ, ದೌಲತ್‌ಪುರ, ಬನ್ನಿಹಟ್ಟಿ, ನಾಗಲಾಪುರ, ತಾರಾನಗರ, ಜೋಗ ಹಾಗೂ ತಾಳೂರು ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಲ್ಲಿ ಕೆಲಕಾಲ ಉತ್ತಮ ಮಳೆ ಸುರಿಯಿತು.

ಬೆಳಗ್ಗೆಯಿಂದಲೇ ಮೋಡ ಮುಸುಕಿದ ವಾತಾವರಣವಿದ್ದು, ಜೈಸಿಂಗಪುರ, ಸುಶೀಲನಗರ ಹಾಗೂ ದೌಲತ್‌ಪುರ ಗ್ರಾಮಗಳಲ್ಲಿ ಬೆಳಗ್ಗೆಯಿಂದ ಸಂಜೆಯವರೆಗೆ ಬಿಟ್ಟು ಬಿಟ್ಟು ಮಳೆಯಾಗಿದೆ. ಮುರಾರಿಪುರ, ಬನ್ನಿಹಟ್ಟಿ, ನಾಗಲಾಪುರ, ತಾರಾನಗರ, ಜೋಗ ಹಾಗೂ ತಾಳೂರು ಗ್ರಾಮಗಳಲ್ಲಿ ಸಂಜೆ ಉತ್ತಮ ಮಳೆ ಸುರಿಯಿತು.

ಮಳೆಯಿಂದಾಗಿ ಗ್ರಾಮೀಣ ಪ್ರದೇಶಗಳಲ್ಲಿ ವಾತಾವರಣ ತಂಪಾಗಿದ್ದು, ರೈತರಲ್ಲಿ ಸಂತಸ ಮೂಡಿಸಿದೆ.

# ಕಂಪ್ಲಿ ರೈತರಿಗೆ 90 ದಿನ ನಿರಂತರ ನೀರಿಗೆ ಆಗ್ರಹ



ಕಂಪ್ಲಿ: ತುಂಗಭದ್ರಾ ಬಲದಂಡೆ ಕೆಳಮಟ್ಟದ ಕಾಲುವೆಗೆ ಕೇವಲ 10 ದಿನ ನೀರು ಹರಿಸುವುದರಿಂದ ರೈತರಿಗೆ ಯಾವುದೇ ಪ್ರಯೋಜನವಾಗುವುದಿಲ್ಲ. ರಾಜ್ಯ ಮತ್ತು ಆಂಧ್ರಪ್ರದೇಶದ ಪಾಲಿನ ನೀರನ್ನು ಒಟ್ಟಾಗಿ ಕನಿಷ್ಠ 90 ದಿನಗಳ ಕಾಲ ನಿರಂತರವಾಗಿ ಕಾಲುವೆಗೆ ಹರಿಸಬೇಕು ಎಂದು ಮಾಜಿ ಶಾಸಕ ಟಿ.ಎಚ್. ಸುರೇಶ್‌ಬಾಬು ಆಗ್ರಹಿಸಿದ್ದಾರೆ.

ಈ ಕುರಿತು ಸೋಮವಾರ ಪತ್ರಿಕಾ ಪ್ರಕಟಣೆ ನೀಡಿರುವ ಅವರು, ರೈತರ ಹಿತದೃಷ್ಟಿಯಿಂದ ಶಾಸಕ ಜೆ.ಎನ್. ಗಣೇಶ್ ಅವರು ರಾಜ್ಯ ಹಾಗೂ ಆಂಧ್ರಪ್ರದೇಶದ ಮುಖ್ಯಮಂತ್ರಿಗಳು, ಶಾಸಕರು ಮತ್ತು ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಕೂಡಲೇ ಸಮಾಲೋಚನೆ ನಡೆಸಿ ಕಾಲುವೆಗೆ ನಿರಂತರ ನೀರು ಹರಿಸಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

ಹಿಂದೆ ಬಿಜೆಪಿ ಸರ್ಕಾರ ಅಧಿಕಾರದಲ್ಲಿದ್ದ ಸಂದರ್ಭದಲ್ಲಿ ಜಲಾಶಯದಲ್ಲಿ ಸುಮಾರು 40 ಟಿಎಂಸಿ ಅಡಿ ನೀರು ಇದ್ದಾಗಲೂ ರೈತರ ಬೆಳೆಗಳಿಗೆ ನೀರು ಹರಿಸಲಾಗಿತ್ತು. ಪ್ರಸ್ತುತ ಜಲಾಶಯದಲ್ಲಿ ಸುಮಾರು 94 ಟಿಎಂಸಿ ಅಡಿ ನೀರಿದ್ದರೂ ಕಾಂಗ್ರೆಸ್ ಸರ್ಕಾರ ರೈತರಿಗೆ ಸಮರ್ಪಕವಾಗಿ ನೀರು ಒದಗಿಸುತ್ತಿಲ್ಲ ಎಂದು ಅವರು ಆರೋಪಿಸಿದ್ದಾರೆ.

ಜಲಾಶಯಕ್ಕೆ ಕ್ರಸ್ಟ್‌ಗೇಟ್ ಅಳವಡಿಸುವ ಕಾಮಗಾರಿಯಿಂದ ರೈತರು ಈಗಾಗಲೇ ಒಂದು ಬೆಳೆಯನ್ನು ಕಳೆದುಕೊಂಡಿದ್ದಾರೆ. ಇದರ ಜೊತೆಗೆ ಮಳೆಯ ಕೊರತೆಯಿಂದ ಬೆಳೆಗಳ ಬೆಳವಣಿಗೆ ಕುಂಠಿತಗೊಂಡಿದ್ದು, ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಸುರೇಶ್‌ಬಾಬು ತಿಳಿಸಿದ್ದಾರೆ.

ರೈತರ ಬೆಳೆಗಳನ್ನು ಉಳಿಸಲು ಹಾಗೂ ಅವರ ಸಂಕಷ್ಟಕ್ಕೆ ಸ್ಪಂದಿಸಲು ಕಾಲುವೆಗೆ ನಿರಂತರವಾಗಿ ನೀರು ಹರಿಸುವ ಕುರಿತು ಸರ್ಕಾರ ತುರ್ತು ಕ್ರಮ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದ್ದಾರೆ.

# ಕನಿಷ್ಠ ವೇತನ ಜಾರಿಗೆ ಆಗ್ರಹಿಸಿ ಸೆ. 2ರಿಂದ ಎಐಯುಟಿಯುಸಿ ಧರಣಿ

ಬಳ್ಳಾರಿ: ಪರಿಷ್ಕೃತ ಕನಿಷ್ಠ ವೇತನವನ್ನು ತಕ್ಷಣ ಜಾರಿಗೊಳಿಸಬೇಕು ಎಂದು ಆಗ್ರಹಿಸಿ ಸೆಪ್ಟೆಂಬರ್ 2ರಿಂದ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಅಹೋರಾತ್ರಿ ಪ್ರತಿಭಟನಾ ಧರಣಿ ನಡೆಸಲಾಗುವುದು ಎಂದು ಎಐಯುಟಿಯುಸಿ ತಿಳಿಸಿದೆ.

9 ವರ್ಷಗಳ ಬಳಿಕ ಕನಿಷ್ಠ ವೇತನ ಸಲಹಾ ಮಂಡಳಿಯ ಶಿಫಾರಸಿನಂತೆ ರಾಜ್ಯ ಸರ್ಕಾರವು 2026ರ ಮೇ 22ರಂದು 81 ನಿಗದಿತ ಉದ್ಯೋಗಗಳಿಗೆ ಕನಿಷ್ಠ ವೇತನ ಪರಿಷ್ಕರಿಸಿ ಅಂತಿಮ ಅಧಿಸೂಚನೆ ಹೊರಡಿಸಿತ್ತು. ಆದರೆ, ವೇತನ ಹೆಚ್ಚಳವನ್ನು ಮರುಪರಿಶೀಲಿಸಲು ಸಂಪುಟ ಉಪಸಮಿತಿ ರಚಿಸಿ ಜಾರಿಗೆ ತಡೆ ನೀಡಿರುವುದು ಕಾರ್ಮಿಕ ವಿರೋಧಿ ಧೋರಣೆಯಾಗಿದೆ ಎಂದು ಸಂಘಟನೆ ಆರೋಪಿಸಿದೆ.

ಸರ್ಕಾರ ಕೂಡಲೇ ಸಂಪುಟ ಉಪಸಮಿತಿಯನ್ನು ರದ್ದುಪಡಿಸಿ, ಪರಿಷ್ಕೃತ ಕನಿಷ್ಠ ವೇತನವನ್ನು ಬಾಕಿ ವೇತನದ ವ್ಯತ್ಯಾಸದೊಂದಿಗೆ ಕಾರ್ಮಿಕರಿಗೆ ಪಾವತಿಸಬೇಕು ಎಂದು ಎಐಯುಟಿಯುಸಿ ಆಗ್ರಹಿಸಿದೆ. ಉದ್ಯಮಿಗಳ ಒತ್ತಡಕ್ಕೆ ಮಣಿದು ಸರ್ಕಾರ ವೇತನ ಪರಿಷ್ಕರಣೆ ಜಾರಿಗೆ ತಡೆ ನೀಡಿರುವುದು ಸರಿಯಲ್ಲ ಎಂದು ಮುಖಂಡರು ಆಕ್ಷೇಪ ವ್ಯಕ್ತಪಡಿಸಿದರು. ಈ ಕುರಿತು ನಡೆದ ಸುದ್ದಿಗೋಷ್ಠಿಯಲ್ಲಿ ಎಐಯುಟಿಯುಸಿ ಜಿಲ್ಲಾ ಅಧ್ಯಕ್ಷ ಎ. ದೇವದಾಸ್, ಕಾರ್ಯದರ್ಶಿ ಡಾ. ಪ್ರಮೋದ್ ಎನ್. ಸೇರಿದಂತೆ ಸಂಘಟನೆಯ ಮುಖಂಡರು ಉಪಸ್ಥಿತರಿದ್ದರು.

# ಹಟ್ಟಿ ಚಿನ್ನದ ಗಣಿ: ಘಟ್ಟ ರಸ್ತೆಯಲ್ಲಿ ಅಪಘಾತಗಳ ಆತಂಕ

## ಹೆದ್ದಾರಿ ವಿಸ್ತರಣೆಗೆ ಜನರ ಒತ್ತಾಯ



ಹಟ್ಟಿ: ಲಿಂಗಸುಗೂರು ತಾಲ್ಲೂಕಿನ ಗುರುಗುಂಟಾ ಹೋಬಳಿ ವ್ಯಾಪ್ತಿಯ ಗೋಲಪಲ್ಲಿ ಗ್ರಾಮದ ಬಳಿ ಹಾದುಹೋಗುವ ರಾಷ್ಟ್ರೀಯ ಹೆದ್ದಾರಿ 150(ಎ)ರ ಘಟ್ಟ ಪ್ರದೇಶದಲ್ಲಿ ಅಪಘಾತಗಳ ಸಂಖ್ಯೆ ಹೆಚ್ಚಾಗುತ್ತಿದ್ದು, ವಾಹನ ಸವಾರರು ಆತಂಕದಿಂದ ಸಂಚರಿಸುವಂತಾಗಿದೆ. ಗುರುಗುಂಟಾದಿಂದ ತಿಂಥಣಿ ಸೇತುವೆವರೆಗೆ ಇಕ್ಕಟ್ಟಾದ ಹಾಗೂ ಕಡಿದಾದ ಇಳಿಜಾರು ರಸ್ತೆ ಇರುವುದರಿಂದ ಸಂಚಾರಕ್ಕೆ ತೀವ್ರ ತೊಂದರೆಯಾಗುತ್ತಿದೆ. ವಿಶೇಷವಾಗಿ ಗೋಲಪಲ್ಲಿ ಬಳಿಯ ಘಟ್ಟ ಪ್ರದೇಶದಲ್ಲಿ ತಿಂಗಳಿಗೆ ಮೂರ್ನಾಲ್ಕು ಅಪಘಾತಗಳು ಸಂಭವಿಸುತ್ತಿವೆ ಎಂದು ಸ್ಥಳೀಯರು ತಿಳಿಸಿದ್ದಾರೆ. ಅಪಘಾತ ಸಂಭವಿಸಿದ ಸಂದರ್ಭದಲ್ಲಿ ಹೆದ್ದಾರಿಯಲ್ಲಿ ಗಂಟೆಗಟ್ಟಲೆ ವಾಹನಗಳು ಸಾಲುಗಟ್ಟಿ ನಿಲ್ಲುತ್ತವೆ. ಸಂಚಾರ ದಟ್ಟಣೆ ಹೆಚ್ಚಾದಾಗ ವಾಹನಗಳು ಜಾಲಹಳ್ಳಿ, ಹಟ್ಟಿ, ಯಲಗಟ್ಟಾ ಹಾಗೂ ಗೌಡೂರು ಮಾರ್ಗವಾಗಿ 40ರಿಂದ 50 ಕಿ.ಮೀ. ಸುತ್ತು ಬಳಸಿ ತೆರಳಬೇಕಾದ ಪರಿಸ್ಥಿತಿ ನಿರ್ಮಾಣವಾಗುತ್ತಿದೆ. ರಸ್ತೆಯಲ್ಲಿ ಸೂಕ್ತ ಎಚ್ಚರಿಕೆ ಹಾಗೂ ಮಾರ್ಗಸೂಚಿ ಫಲಕಗಳ ಕೊರತೆಯೂ ಅಪಘಾತಗಳಿಗೆ ಕಾರಣವಾಗುತ್ತಿದೆ. ಘಟ್ಟ ಪ್ರದೇಶದಲ್ಲಿ ಲಾರಿ, ಬಸ್ ಹಾಗೂ ಕಾರುಗಳು ದಿಬ್ಬ ಏರಲು ಪರದಾಡುತ್ತಿವೆ. ಕೆಲ ಸಂದರ್ಭಗಳಲ್ಲಿ ಬ್ರೇಕ್ ವೈಫಲ್ಯಗೊಂಡು ಹಿಂಬದಿಯ ವಾಹನಗಳಿಗೆ ಡಿಕ್ಕಿ ಹೊಡೆದ ಘಟನೆಗಳೂ ನಡೆದಿವೆ ಎಂದು ಸ್ಥಳೀಯರು ಹೇಳಿದ್ದಾರೆ. ತಿರುವುಗಳಲ್ಲಿ ಚಾಲಕರಿಗೆ ರಸ್ತೆ ಸ್ಪಷ್ಟವಾಗಿ ಗೋಚರಿಸದಿರುವುದರಿಂದ ಅಪಘಾತದ ಅಪಾಯ ಮತ್ತಷ್ಟು ಹೆಚ್ಚಾಗಿದೆ. ಹೀಗಾಗಿ ಹೆದ್ದಾರಿಯನ್ನು ಶೀಘ್ರ ವಿಸ್ತರಿಸಿ, ಅಪಾಯಕಾರಿ ಸ್ಥಳಗಳಲ್ಲಿ ಎಚ್ಚರಿಕೆ ಹಾಗೂ ಮಾರ್ಗಸೂಚಿ ಫಲಕಗಳನ್ನು ಅಳವಡಿಸಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

ಲಿಂಗಸುಗೂರಿನಿಂದ ಹೊನ್ನಳ್ಳಿ ಗ್ರಾಮದವರೆಗೆ ಹೆದ್ದಾರಿ ವಿಸ್ತರಣೆ ಕಾಮಗಾರಿ ನಡೆದಿದ್ದರೂ, ಉಳಿದ ಭಾಗದಲ್ಲಿ ಕಾಮಗಾರಿ ಆರಂಭವಾಗಿಲ್ಲ. ಕಾಮಗಾರಿ ಯಾವಾಗ ಪೂರ್ಣಗೊಳ್ಳಲಿದೆ ಎಂಬ ಪ್ರಶ್ನೆ ಸಾರ್ವಜನಿಕರನ್ನು ಕಾಡುತ್ತಿದೆ.

# ಅಡುಗೆ ಅನಿಲ ಸೋರಿಕೆಯಿಂದ ಬೆಂಕಿ ಅವಘಡ; ವೃದ್ಧೆ ಪಾರು

ಬಾಗಲಕೋಟೆ: ಅಡುಗೆ ಅನಿಲ ಸೋರಿಕೆಯಿಂದ ಮನೆಯಲ್ಲಿ ಬೆಂಕಿ ಹೊತ್ತಿಕೊಂಡು 67 ವರ್ಷದ ವೃದ್ಧೆಯೊಬ್ಬರು ಗಾಯಗೊಂಡಿರುವ ಘಟನೆ ಬಾಗಲಕೋಟೆ ಜಿಲ್ಲೆಯ ಜಮಖಂಡಿಯಲ್ಲಿ ನಡೆದಿದೆ. ಜಮಖಂಡಿಯ ಚೌಡಯ್ಯನಗರದ ಮಾವಿನ ಮಸಾರಿ ಬಡಾವಣೆಯಲ್ಲಿ ಈ ಘಟನೆ ನಡೆದಿದೆ. ಮನೆಯಲ್ಲಿ ಅಡುಗೆ ಅನಿಲ ಸೋರಿಕೆಯಾಗಿ ಏಕಾಏಕಿ ಬೆಂಕಿ ಕಾಣಿಸಿಕೊಂಡಿದೆ. ಈ ವೇಳೆ ಮನೆಯಲ್ಲಿದ್ದ ಲಕ್ಷ್ಮೀಬಾಯಿ ಪತ್ತಾರ (67) ಅವರಿಗೆ ಸಣ್ಣಪುಟ್ಟ ಸುಟ್ಟ ಗಾಯಗಳಾಗಿವೆ. ಬೆಂಕಿ ಕಾಣಿಸಿಕೊಂಡ ತಕ್ಷಣ ಸ್ಥಳೀಯರು ಅಗ್ನಿಶಾಮಕ ದಳ ಹಾಗೂ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಕೂಡಲೇ ಜಮಖಂಡಿ ಅಗ್ನಿಶಾಮಕ ಸಿಬ್ಬಂದಿ ಹಾಗೂ ಪೊಲೀಸರು ಸ್ಥಳಕ್ಕೆ ಆಗಮಿಸಿದ್ದಾರೆ. ಅಗ್ನಿಶಾಮಕ ಸಿಬ್ಬಂದಿ ಕಾರ್ಯಾಚರಣೆ ನಡೆಸಿ ಮನೆಯಲ್ಲಿದ್ದ ಬೆಂಕಿಯನ್ನು ನಿಯಂತ್ರಣಕ್ಕೆ ತಂದಿದ್ದಾರೆ. ಬಳಿಕ ಗಾಯಗೊಂಡಿದ್ದ ಲಕ್ಷ್ಮೀಬಾಯಿ ಅವರನ್ನು ರಕ್ಷಿಸಿ ಜಮಖಂಡಿ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಅನಂತ ಜನಶಕ್ತಿ



# ಬಳ್ಳಾರಿ ಉಸ್ತುವಾರಿ ಹುದ್ದೆ ನಾಯಕರಿಗೆ ಸಂಕಷ್ಟವೇ?

## ಹಗರಣ, ಸೋಲು, ರಾಜಕೀಯ ಹಿನ್ನಡೆ; ಮತ್ತೆ ಚರ್ಚೆಗೆ ಬಂದ 'ಬಳ್ಳಾರಿ ಶಾಪ'

ಬಳ್ಳಾರಿ: ಗಣಿನಾಡು ಎಂದೇ ಖ್ಯಾತಿ ಪಡೆದಿರುವ ಬಳ್ಳಾರಿ ಜಿಲ್ಲೆಯ ರಾಜಕೀಯ ಯಾವಾಗಲೂ ಹೈವೋಲ್ಟೇಜ್. ಅಧಿಕಾರ, ಭ್ರಷ್ಟಾಚಾರ, ಗಣಿಗಾರಿಕೆ ಹಾಗೂ ಹಗರಣಗಳ ಕಾರಣಕ್ಕೆ ಸದಾ ರಾಜ್ಯಮಟ್ಟದಲ್ಲಿ ಮುಂಚೂಣಿಯಲ್ಲಿರುವ ಬಳ್ಳಾರಿ ಜಿಲ್ಲೆಯ ಉಸ್ತುವಾರಿ ಸಚಿವರ ಹುದ್ದೆ ಇದೀಗ ಮತ್ತೊಮ್ಮೆ ಚರ್ಚೆಗೆ ಗ್ರಾಸವಾಗಿದೆ.

ಕಳೆದ ಎರಡು ದಶಕಗಳ ರಾಜಕೀಯ ಇತಿಹಾಸವನ್ನು ಗಮನಿಸಿದರೆ ಬಳ್ಳಾರಿಯ ಜಿಲ್ಲಾ ಉಸ್ತುವಾರಿ ವಹಿಸಿಕೊಂಡ ಬಹುತೇಕ ನಾಯಕರಿಗೆ ಒಂದಲ್ಲಾ ಒಂದು ರೂಪದಲ್ಲಿ ರಾಜಕೀಯ ಹಿನ್ನಡೆ, ಹಗರಣಗಳ ನಂಟು ಅಥವಾ ಅಧಿಕಾರ ನಷ್ಟದ ಸಂಕಷ್ಟ ಎದುರಾಗುತ್ತಲೇ ಬಂದಿದೆ. ಎಂ.ಪಿ. ಪ್ರಕಾಶ್ ಅವರಿಂದ ಆರಂಭವಾದ ಈ ರಾಜಕೀಯ ಗ್ರಹಚಾರದ ಸರಪಳಿ ಇಂದಿನ ಬಿ. ನಾಗೇಂದ್ರವರೆಗೂ ಮುಂದುವರಿದಿರುವುದು ರಾಜಕೀಯ ವಲಯದಲ್ಲಿ ಅಚ್ಚರಿಗೆ ಕಾರಣವಾಗಿದೆ.

ಹಿನ್ನಡೆಯ ಹೆಜ್ಜೆಗುರುತುಗಳು:

ದಿ. ಎಂ.ಪಿ. ಪ್ರಕಾಶ್ (2006): 2006ರಲ್ಲಿ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವರಾಗಿ ಕಾರ್ಯನಿರ್ವಹಿಸಿದ ಹಿರಿಯ ಮುತ್ಸದ್ದಿ ಎಂ.ಪಿ. ಪ್ರಕಾಶ್ ಅವರು, ನಂತರ ನಡೆದ 2008ರ ವಿಧಾನಸಭಾ ಚುನಾವಣೆಯಲ್ಲಿ ಹರಪನಹಳ್ಳಿ ಕ್ಷೇತ್ರದಿಂದ ಅನಿರೀಕ್ಷಿತ ಸೋಲನುಭವಿಸಿದರು.

ಜಿ. ಜನಾರ್ದನ ರೆಡ್ಡಿ (2008): ಬಿಜೆಪಿ ಸರ್ಕಾರದಲ್ಲಿ ಗಣಿ ಜಿಲ್ಲೆಯ ಪ್ರಶ್ನಾತೀತ ನಾಯಕರಾಗಿ ಉಸ್ತುವಾರಿ ವಹಿಸಿಕೊಂಡಿದ್ದ ಜನಾರ್ದನ ರೆಡ್ಡಿಗೆ ಅಕ್ರಮ ಗಣಿಗಾರಿಕೆ ಪ್ರಕರಣ ತೀವ್ರ ಮುಳುವಾಯಿತು. ಬಂಧನ, ಸುದೀರ್ಘ ಜೈಲುವಾಸದೊಂದಿಗೆ ಅವರ ರಾಜಕೀಯ ಜೀವನಕ್ಕೆ ದೊಡ್ಡ ಹಿನ್ನಡೆಯಾಯಿತು.

ಪಿ.ಟಿ. ಪರಮೇಶ್ವರ್ ನಾಯ್ಕ್ (2013): ಸಿದ್ದರಾಮಯ್ಯ ಸಂಪುಟದಲ್ಲಿ ಉಸ್ತುವಾರಿಯಾಗಿದ್ದ ಪರಮೇಶ್ವರ್ ನಾಯ್ಕ್, ಡಿವೈಎಸ್ಪಿ ಅನುಪಮಾ ಶೆಣೈ ವರ್ಗಾವಣೆ ವಿವಾದದಲ್ಲಿ ಸಿಲುಕಿ ಸಚಿವ ಸ್ಥಾನ ಕಳೆದುಕೊಳ್ಳಬೇಕಾಯಿತು.

ಸಂತೋಷ್ ಲಾಡ್ (2016): ಜಿಲ್ಲೆಯ ಉಸ್ತುವಾರಿ ಜವಾಬ್ದಾರಿ ಹೊತ್ತ ಸಂತೋಷ್ ಲಾಡ್ ಅವರು 2018ರ ವಿಧಾನಸಭಾ ಚುನಾವಣೆಯಲ್ಲಿ ಕಲಘಟಗಿ ಕ್ಷೇತ್ರದಲ್ಲಿ ಪರಾಭವಗೊಂಡರು.

ಆನಂದ್ ಸಿಂಗ್ (2019): ಬಿ.ಎಸ್. ಯಡಿಯೂರಪ್ಪ ಹಾಗೂ ಬಸವರಾಜ ಬೊಮ್ಮಾಯಿ ಸಂಪುಟದಲ್ಲಿ ಉಸ್ತುವಾರಿಯಾಗಿದ್ದ ಆನಂದ್ ಸಿಂಗ್, 2023ರ ಚುನಾವಣಾ ರಾಜಕೀಯದಿಂದ ಹಿಂದೆ ಸರಿದರು. ವಿಜಯನಗರ ಕ್ಷೇತ್ರದಲ್ಲಿ ತಮ್ಮ ಪುತ್ರನನ್ನು ಕಣಕ್ಕಿಳಿಸಿದರೂ ಗೆಲುವು ದಕ್ಕಿಸಿಕೊಳ್ಳಲಾಗಲಿಲ್ಲ.



ಬಿ. ಶ್ರೀರಾಮುಲು (2022): ಬಳ್ಳಾರಿ ಉಸ್ತುವಾರಿ ವಹಿಸಿಕೊಂಡ ಪ್ರಭಾವಿ ನಾಯಕ ಶ್ರೀರಾಮುಲು 2023ರ ವಿಧಾನಸಭಾ ಚುನಾವಣೆಯಲ್ಲಿ ಹಾಗೂ ಬಳಿಕ 2024ರ ಬಳ್ಳಾರಿ ಲೋಕಸಭಾ ಚುನಾವಣೆಯಲ್ಲಿ ಸತತ ಸೋಲು ಕಂಡರು.

ಬಿ. ನಾಗೇಂದ್ರ (2023): ಕಾಂಗ್ರೆಸ್ ಸರ್ಕಾರದಲ್ಲಿ ಉಸ್ತುವಾರಿಯಾಗಿದ್ದ ಬಿ. ನಾಗೇಂದ್ರ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಬಹುಕೋಟಿ ಹಗರಣದಲ್ಲಿ ಸಿಲುಕಿ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿ ಜೈಲು ಪಾಲಾಗಬೇಕಾಯಿತು. ಇದೀಗ ಪುನಃ ನಾಗೇಂದ್ರ ಅವರನ್ನೇ ಸುತ್ತುವರಿದಿರುವ ವಾಲ್ಮೀಕಿ ಹಗರಣದ ಕಾವು ಸದನದಿಂದ ಬೀದಿ ಹೋರಾಟದವರೆಗೂ ತಲುಪಿದೆ.

ಜಮೀರ್ ಅಹ್ಮದ್(2026): ನಾಗೇಂದ್ರ ರಾಜೀನಾಮೆ ಬಳಿಕ ಜಮೀರ್ ಅಹ್ಮದ್ ಉಸ್ತುವಾರಿ ವಹಿಸಿಕೊಂಡರು. ದಾವಣಗೆರೆ ಉಪಚುನಾವಣೆಯಲ್ಲಿ ಜಮೀರ್ ಮೇಲೆ ಪಕ್ಷ ವಿರೋಧಿ ಚಟುವಟಿಕೆ ನಡೆಸಿದ ಆರೋಪ ಸಹ ಕೇಳಿ ಬಂದಿತ್ತು. ಎರಡನೇ ಬಾರಿ ಮಂತ್ರಿಸ್ಥಾನ ಪಡೆದ ಬಳಿಕ ಜಮೀರ್ ಅಹ್ಮದ್ ನನಗೆ ವಿಜಯನಗರ ಜಿಲ್ಲೆಯ ಉಸ್ತುವಾರಿ ಪಟ್ಟದಿಂದ ಕೈ ಬಿಡುವಂತೆ ಸಿಎಂ ಡಿಕೆ ಶಿವಕುಮಾರ್ ಅವರಿಗೆ ಪತ್ರ ಬರೆದು ಮನವಿ ಮಾಡಿದ್ದರು.

ಪ್ರಭಾವಿ ರಾಜಕಾರಣಿಗಳು ತುದಿಗಾಲಿನಲ್ಲಿ ನಿಂತು ಪಡೆಯುವ ಬಳ್ಳಾರಿ ಜಿಲ್ಲಾ ಉಸ್ತುವಾರಿ ಹುದ್ದೆ ನಿಜಕ್ಕೂ ರಾಜಕೀಯವಾಗಿ ಪವರ್‌ಫುಲ್ ಆದರೂ, ನಂತರ ಎದುರಾಗುವ ಸಂಕಷ್ಟಗಳು ಕೇವಲ ಕಾಕತಾಳೀಯವೇ ಅಥವಾ ಗಣಿ ಜಿಲ್ಲೆಯ ಹೈವೋಲ್ಟೇಜ್ ರಾಜಕೀಯದ ಪ್ರಭಾವವೇ ಎಂಬ ಪ್ರಶ್ನೆ ಈಗ ಎಲ್ಲೆಡೆ ಸದ್ದು ಮಾಡುತ್ತಿದೆ.

## ಗದಗ ಜಿಲ್ಲೆಯಲ್ಲಿ "ಭಾರತ ಜೋಡೋ ಯುವ ಸಂಘ" ಸ್ಥಾಪನೆಗೆ ಒತ್ತು



ಗದಗ, ಆ.25: ಯುವಕರಲ್ಲಿ ರಾಷ್ಟ್ರೀಯ ಭಾವನೆ, ಸಾಮಾಜಿಕ ಜಾಗೃತಿ, ಸೌಹಾರ್ದತೆ ಹಾಗೂ ಸೇವಾ ಮನೋಭಾವ ಬೆಳೆಸುವ ಉದ್ದೇಶದಿಂದ ಜಿಲ್ಲೆಯಲ್ಲಿ 'ಭಾರತ ಜೋಡೋ ಯುವ ಸಂಘ'ಗಳನ್ನು ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.

ನಗರದ ಜಿಲ್ಲಾಡಳಿತ ಭವನದಲ್ಲಿ 'ಭಾರತ ಜೋಡೋ ಯುವ ಸಂಘ'ಗಳ ಸ್ಥಾಪನೆ ಕುರಿತು ನಡೆದ ವಿಡಿಯೋ ಸಂವಾದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಯುವಕರು ಸಮಾಜದ ಮುಖ್ಯವಾಹಿನಿಗೆ ಬಂದು ದೇಶದ ಅಭಿವೃದ್ಧಿ ಹಾಗೂ ಸಾಮಾಜಿಕ ಐಕ್ಯತೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು. ಗ್ರಾಮೀಣ ಹಾಗೂ ನಗರ ಪ್ರದೇಶಗಳ ಯುವಕರು ಸಂಘಟನಾತ್ಮಕ ಚಟುವಟಿಕೆಗಳಲ್ಲಿ ಭಾಗವಹಿಸಿ ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಬೇಕು ಎಂದು ಹೇಳಿದರು.

ಯುವಕರಲ್ಲಿ ನಾಯಕತ್ವ ಗುಣ ಬೆಳೆಸಲು ಹಾಗೂ ಸಮಾಜದ ಅಭಿವೃದ್ಧಿಯಲ್ಲಿ ಅವರ ಪಾತ್ರ ಹೆಚ್ಚಿಸಲು ಈ ಸಂಘಗಳು ಉತ್ತಮ ವೇದಿಕೆಯಾಗಲಿವೆ. ಜಿಲ್ಲೆಯ ಎಲ್ಲ ತಾಲೂಕುಗಳು ಮತ್ತು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನಿಗದಿತ ಕಾಲಮಿತಿಯೊಳಗೆ ಸಂಘಗಳ ರಚನೆ ಪೂರ್ಣಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ತಾಲೂಕು ಮಟ್ಟದ ಅಧಿಕಾರಿಗಳು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ಸಂಬಂಧಪಟ್ಟ ಇಲಾಖೆಗಳ ಸಿಬ್ಬಂದಿ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ಹೆಚ್ಚಿನ ಸಂಖ್ಯೆಯಲ್ಲಿ ಯುವಕರು ಸಂಘಗಳೊಂದಿಗೆ ಕೈಜೋಡಿಸುವಂತೆ ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾಧಿಕಾರಿ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಜಿಲ್ಲಾ ಪಂಚಾಯಿತಿ ಯೋಜನಾ ನಿರ್ದೇಶಕ ಎಂ.ವಿ. ಚಳಗೇರಿ, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಮೆಕ್ಕೆಜೋಳ ಸೇವಿಸಿ ಜಾನುವಾರುಗಳ ಸಾವು
## 20ಕ್ಕೂ ಹೆಚ್ಚು ಅಸ್ವಸ್ಥ; ಪರಿಹಾರಕ್ಕೆ ಆಗ್ರಹ



ಗದಗ, ಆ.25: ಕ್ರಿಮಿನಾಶಕ ಸಿಂಪಡಿಸಿದ ಮೆಕ್ಕೆಜೋಳ ಸೇವಿಸಿದ ಪರಿಣಾಮ ಎನ್ನಲಾದ ಶಂಕೆಯಲ್ಲಿ ಹತ್ತಾರು ಜಾನುವಾರುಗಳು ಮೃತಪಟ್ಟಿದ್ದು, 20ಕ್ಕೂ ಹೆಚ್ಚು ಜಾನುವಾರುಗಳು ಅಸ್ವಸ್ಥಗೊಂಡಿರುವ ಘಟನೆ ಜಿಲ್ಲೆಯ ಲಕ್ಷ್ಮೇಶ್ವರ ತಾಲ್ಲೂಕಿನ ಮುನಿಯಾನ್ ತಾಂಡದಲ್ಲಿ ನಡೆದಿದೆ.

ಸಕ್ರಪ್ಪ ಲಮಾಣಿ, ರಾಮಣ್ಣ ಲಮಾಣಿ, ತುಳಜಾಬಾಯಿ ಲಮಾಣಿ, ಮಂಗಲೆಪ್ಪ, ಸೋಮಪ್ಪ, ದೇವರಾಜ್ ಸೇರಿದಂತೆ ಹಲವು ಜಾನುವಾರು ಮಾಲೀಕರಿಗೆ ನಷ್ಟ ಉಂಟಾಗಿದೆ. ಇದುವರೆಗೆ 6 ಆಕಳು, 5 ಎಮ್ಮೆ ಹಾಗೂ 2 ಕರುಗಳು ಸೇರಿ 13 ಜಾನುವಾರುಗಳು ಮೃತಪಟ್ಟಿವೆ ಎಂದು ತಿಳಿದುಬಂದಿದೆ.

ಮುನಿಯಾನ್ ತಾಂಡದಲ್ಲಿ ನೂರಾರು ಜಾನುವಾರುಗಳಿದ್ದು, ಅವುಗಳನ್ನು ಕಾರ್ಮಿಕರು ನೋಡಿಕೊಳ್ಳುತ್ತಿದ್ದಾರೆ. ಮೆಕ್ಕೆಜೋಳ ಬೆಳೆಗೆ ಕ್ರಿಮಿನಾಶಕ ಸಿಂಪಡಿಸಲಾಗಿತ್ತು. ಬಳಿಕ ಜಾನುವಾರುಗಳು ಅದೇ ಬೆಳೆಯನ್ನು ಸೇವಿಸಿದ್ದು, ಇದರಿಂದ ವಿಷಕಾರಿ ಪರಿಣಾಮ ಉಂಟಾಗಿ ಅವು ಅಸ್ವಸ್ಥಗೊಂಡು ಮೃತಪಟ್ಟಿರಬಹುದು ಎಂಬ ಶಂಕೆ ವ್ಯಕ್ತವಾಗಿದೆ.

ಘಟನೆ ತಿಳಿದು ಪಶುವೈದ್ಯಾಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಜಾನುವಾರುಗಳ ಆರೋಗ್ಯ ಪರಿಶೀಲಿಸಿದ್ದಾರೆ. ಅಸ್ವಸ್ಥಗೊಂಡಿರುವ 20ಕ್ಕೂ ಹೆಚ್ಚು ಜಾನುವಾರುಗಳಿಗೆ ಚಿಕಿತ್ಸೆ ಮುಂದುವರಿದಿದೆ. ಹೈನುಗಾರಿಕೆಯನ್ನೇ ನಂಬಿಕೊಂಡು ಜೀವನ ನಡೆಸುತ್ತಿರುವ ಕುಟುಂಬಗಳಿಗೆ ಜಾನುವಾರುಗಳ ಸಾವು ದೊಡ್ಡ ಆರ್ಥಿಕ ಹೊಡೆತ ನೀಡಿದೆ. ಕಣ್ಣೆದುರೇ ಜಾನುವಾರುಗಳು ಮೃತಪಟ್ಟಿರುವುದರಿಂದ ಮಾಲೀಕರು ಕಂಗಾಲಾಗಿದ್ದಾರೆ. ಜಾನುವಾರುಗಳನ್ನು ಕಳೆದುಕೊಂಡ ಕುಟುಂಬಗಳಿಗೆ ಸರ್ಕಾರ ಕೂಡಲೇ ಸೂಕ್ತ ಪರಿಹಾರ ನೀಡಬೇಕು ಹಾಗೂ ಘಟನೆಗೆ ನಿಖರ ಕಾರಣ ಪತ್ತೆಹಚ್ಚಿ ಕ್ರಮ ಕೈಗೊಳ್ಳಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ. ಘಟನೆ ಲಕ್ಷ್ಮೇಶ್ವರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.

## 125 ವರ್ಷ ಹಳೆಯ ತಹಶೀಲ್ದಾರ್ ಕಚೇರಿ
### ಹೊಸ ಪ್ರಜಾಸೌಧಕ್ಕೆ ಇನ್ನೂ ಮುಹೂರ್ತವಿಲ್ಲ



ಗದಗ, ಆ.24: ನಗರದ ಹೃದಯಭಾಗದಲ್ಲಿರುವ ಗದಗ ತಾಲೂಕು ಆಡಳಿತ ಕಚೇರಿ 125 ವರ್ಷಗಳಷ್ಟು ಹಳೆಯ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಕಟ್ಟಡದ ಹಲವು ಭಾಗಗಳು ಶಿಥಿಲಗೊಂಡಿರುವುದರಿಂದ ಸಿಬ್ಬಂದಿ ಹಾಗೂ ಸಾರ್ವಜನಿಕರು ಆತಂಕದಲ್ಲೇ ಓಡಾಡುವ ಪರಿಸ್ಥಿತಿ ನಿರ್ಮಾಣವಾಗಿದೆ.

1902ರಲ್ಲಿ ನಿರ್ಮಾಣವಾದ ಈ ಪಾರಂಪರಿಕ ಕಟ್ಟಡದಲ್ಲಿ ಮೇಲ್ಛಾವಣಿ, ಹಂಚು ಸೇರಿದಂತೆ ಹಲವು ಭಾಗಗಳು ಹಾಳಾಗಿವೆ. ಮಳೆಗಾಲದಲ್ಲಿ ಕಚೇರಿ ಒಳಗೆ ನೀರು ನುಗ್ಗಿ ಸಮಸ್ಯೆ ಉಂಟಾಗುತ್ತಿದೆ. ಪ್ರತಿದಿನ ಸಾವಿರಾರು ಜನರು ಕಚೇರಿಗೆ ಭೇಟಿ ನೀಡುತ್ತಿದ್ದು, ಸೂಕ್ತ ಪಾರ್ಕಿಂಗ್ ವ್ಯವಸ್ಥೆಯೂ ಇಲ್ಲದಿರುವುದು ಮತ್ತಷ್ಟು ತೊಂದರೆ ಉಂಟುಮಾಡಿದೆ.

ಹಳೆಯ ಕಟ್ಟಡದ ಬದಲಿಗೆ ಹೊಸ 'ಪ್ರಜಾ ಸೌಧ' ನಿರ್ಮಿಸಲು ಮಾಜಿ ಸಚಿವ ಹಾಗೂ ಶಾಸಕ ಎಚ್.ಕೆ. ಪಾಟೀಲ ಅವರು ಭೂಮಿಪೂಜೆ ನೆರವೇರಿಸಿ ಸುಮಾರು ಎಂಟು ತಿಂಗಳು ಕಳೆದಿವೆ. ಹೊಸ ಕಟ್ಟಡ ನಿರ್ಮಾಣಕ್ಕಾಗಿ ಸುಮಾರು 16 ಕೋಟಿ ಅನುದಾನವೂ ಬಿಡುಗಡೆಯಾಗಿದೆ. ಆದರೂ ಕಾಮಗಾರಿ ಮಾತ್ರ ಇನ್ನೂ ಆರಂಭವಾಗಿಲ್ಲ.

ಹಳೆಯ ಕಟ್ಟಡವನ್ನು ತೆರವುಗೊಳಿಸಿ ಹೊಸ ಕಟ್ಟಡ ನಿರ್ಮಿಸಬೇಕಾದರೆ ತಹಶೀಲ್ದಾರ್ ಕಚೇರಿಯನ್ನು ತಾತ್ಕಾಲಿಕವಾಗಿ ಸ್ಥಳಾಂತರಿಸಬೇಕಿದೆ.

ಆದರೆ ಸೂಕ್ತ ಪರ್ಯಾಯ ಕಟ್ಟಡ ಅಥವಾ ಜಾಗ ಲಭ್ಯವಾಗದಿರುವುದು ಕಾಮಗಾರಿ ವಿಳಂಬಕ್ಕೆ ಪ್ರಮುಖ ಕಾರಣವಾಗಿದೆ ಎನ್ನಲಾಗಿದೆ.

ಹಳೆಯ ಕಟ್ಟಡದ ಸ್ಥಿತಿ ದಿನದಿಂದ ದಿನಕ್ಕೆ ಹದಗೆಡುತ್ತಿರುವ ಹಿನ್ನೆಲೆಯಲ್ಲಿ ಹೊಸ ಪ್ರಜಾಸೌಧ ನಿರ್ಮಾಣ ಕಾಮಗಾರಿಯನ್ನು ಕೂಡಲೇ ಆರಂಭಿಸಬೇಕು ಎಂಬುದು ಸಾರ್ವಜನಿಕರ ಒತ್ತಾಯವಾಗಿದೆ.

ಪ್ರಿಯ ಓದುಗರೇ, ಈಗ ನೀವು ಹಾರೈಸಿ ಬೆಳೆಸಿದ ಅನಂತ ಜನಶಕ್ತಿ ಕನ್ನಡ ದಿನಪತ್ರಿಕೆ ಸಮಾಜದ ಪ್ರತಿಯೊಂದು ವರ್ಗದ ಧ್ವನಿಯಾಗಿ ಜನಪರ ಸುದ್ದಿಗಳನ್ನು ನಿಮ್ಮ ಮುಂದಿಡುತ್ತೇವೆ.

ಸ್ಥಳೀಯ, ರಾಜ್ಯ, ರಾಷ್ಟ್ರೀಯ ಹಾಗೂ ವಿಶೇಷ ಸುದ್ದಿಗಳನ್ನು ಸಮಗ್ರವಾಗಿ ತಲುಪಿಸುವ ಪ್ರಯತ್ನ ನಮ್ಮದು. ನಮ್ಮ ನಿರಂತರ ಬೆಳವಣಿಗೆಗೆ ಶಕ್ತಿ.

## ಗಂಗಾವತಿಯಲ್ಲಿ ಹುಲಿ ಆತಂಕ; 20ಕ್ಕೂ ಹೆಚ್ಚು ಕ್ಯಾಮೆರಾ ಕಣ್ಗಾವಲು
## ಆನೆಗೊಂದಿ ಬೆಟ್ಟ ಪ್ರದೇಶದಲ್ಲಿ ಹೆಜ್ಜೆ ಗುರುತು ಪತ್ತೆ ಶಂಕೆ

ಕೊಪ್ಪಳ : ಗಂಗಾವತಿ ತಾಲೂಕಿನ ಆನೆಗೊಂದಿ ಸುತ್ತಮುತ್ತಲಿನ ಬೆಟ್ಟ ಪ್ರದೇಶದಲ್ಲಿ ಹುಲಿ ಕಾಣಿಸಿಕೊಂಡಿದೆ ಎಂಬ ಆತಂಕದ ಹಿನ್ನೆಲೆಯಲ್ಲಿ ಅರಣ್ಯ ಇಲಾಖೆ ಹೈ ಅಲರ್ಟ್ ಘೋಷಿಸಿದ್ದು, ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯ ಆರಂಭಿಸಿದೆ.

ಆನೆಗೊಂದಿ ಹಾಗೂ ಬೆಟ್ಟದ ಸುತ್ತಲಿನ ಜನವಸತಿ ಪ್ರದೇಶಗಳಲ್ಲಿ ಅರಣ್ಯ ಇಲಾಖೆ ಸಿಬ್ಬಂದಿ ವಾಹನಗಳ ಮೂಲಕ ಸಂಚರಿಸಿ ಧ್ವನಿವರ್ಧಕದ ಮೂಲಕ ಸಾರ್ವಜನಿಕರಿಗೆ ಎಚ್ಚರಿಕೆ ನೀಡುತ್ತಿದ್ದಾರೆ. ಒಂಟಿಯಾಗಿ ಸಂಚರಿಸದಂತೆ, ಜಾನುವಾರುಗಳನ್ನು ಮೇಯಿಸಲು ಬೆಟ್ಟ ಪ್ರದೇಶಕ್ಕೆ ಕರೆದೊಯ್ಯದಂತೆ ಸೂಚಿಸಲಾಗಿದೆ.

ಬೆಟ್ಟ ಮತ್ತು ಅರಣ್ಯ ಪ್ರದೇಶದಲ್ಲಿ ಹುಲಿಯ ಹೆಜ್ಜೆ ಗುರುತುಗಳು ಪತ್ತೆಯಾಗಿವೆ ಎಂಬ ಮಾಹಿತಿ ಹಿನ್ನೆಲೆಯಲ್ಲಿ ಹುಲಿಯ ಚಲನವಲನದ ಮೇಲೆ ನಿಗಾ ಇರಿಸಲು 20ಕ್ಕೂ ಹೆಚ್ಚು ಸಿಸಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಮುಂದಿನ ದಿನಗಳಲ್ಲಿ ಇನ್ನಷ್ಟು ಕ್ಯಾಮೆರಾಗಳನ್ನು ಅಳವಡಿಸಲು ಅರಣ್ಯ ಇಲಾಖೆ ಕ್ರಮ ಕೈಗೊಂಡಿದೆ. ರೈತರು ಹೊಲಗಳಿಗೆ ಒಬ್ಬರೇ ತೆರಳದಂತೆ, ರಾತ್ರಿ ವೇಳೆ ಅರಣ್ಯ ಪ್ರದೇಶ ಪ್ರವೇಶಿಸದಂತೆ ಹಾಗೂ ಸಾಕುಪ್ರಾಣಿಗಳನ್ನು ಸುರಕ್ಷಿತ ಸ್ಥಳದಲ್ಲಿ ಕಟ್ಟಿಹಾಕುವಂತೆ ಅಧಿಕಾರಿಗಳು ಸೂಚಿಸಿದ್ದಾರೆ. ಕೃಷಿ ಕೆಲಸಗಳಿಗೆ ತೆರಳುವಾಗ ಗುಂಪಿನಲ್ಲಿ ತೆರಳುವಂತೆ ಸಲಹೆ ನೀಡಲಾಗಿದೆ.



ಸಣಾಪುರ, ಬಸಾಪುರ, ನಾರಾಯಣಪೇಟೆ, ಕುಮಾರರಾಮನ ಬೆಟ್ಟ ಹಾಗೂ ತೆಂಬಾ ಅರಣ್ಯ ಪ್ರದೇಶಗಳ ಸುತ್ತಮುತ್ತ ಹುಲಿ ಸಂಚರಿಸುತ್ತಿದೆ ಎಂಬ ವದಂತಿ ಹರಡಿದ್ದು, ಸ್ಥಳೀಯರಲ್ಲಿ ಆತಂಕ ಹೆಚ್ಚಾಗಿದೆ.

## ಹಡಪದ ಅಪ್ಪಣ್ಣ ಜಯಂತಿ ಆ.28ರಂದು ಆಚರಣೆ

ಸಿಂಧನೂರು: ಅಖಿಲ ಕರ್ನಾಟಕ ಹಡಪದ ಸೇವಾ ಸಂಘ ಹಾಗೂ ಹಡಪದ ಸಮಾಜದ ವತಿಯಿಂದ ಶರಣ ಹಡಪದ ಅಪ್ಪಣ್ಣನವರ 892ನೇ ಜಯಂತಿಯನ್ನು ಆ.28ರಂದು ನಗರದ ಟೌನ್‌ಹಾಲ್‌ನಲ್ಲಿ ಆಚರಿಸಲಾಗುವುದು ಎಂದು ಹಡಪದ ಸಮಾಜದ ತಾಲ್ಲೂಕು ಘಟಕದ ಅಧ್ಯಕ್ಷ ಭೀಮಣ್ಣ ಬೆಳಗುರ್ಕಿ ತಿಳಿಸಿದ್ದಾರೆ.

ಅಂದು ಬೆಳಿಗ್ಗೆ 10 ಗಂಟೆಗೆ ನಡೆಯಲಿರುವ ಕಾರ್ಯಕ್ರಮದಲ್ಲಿ ಹಡಪದ ಅಪ್ಪಣ್ಣ ಯುವಕ ಸಂಘದ ತಾಲ್ಲೂಕು ಘಟಕದ ನೂತನ ಪದಾಧಿಕಾರಿಗಳ ಪದಗ್ರಹಣ, ಜನಜಾಗೃತಿ ಸಮಾವೇಶ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ನಿವೃತ್ತ ನೌಕರರಿಗೆ ಸನ್ಮಾನ ಕಾರ್ಯಕ್ರಮ ನಡೆಯಲಿದೆ ಎಂದು ತಿಳಿಸಿದ್ದಾರೆ.

ಜಯಂತಿ ಅಂಗವಾಗಿ ಆ.28ರಂದು ಬೆಳಿಗ್ಗೆ ಬಸವ ವೃತ್ತದಿಂದ ಟೌನ್‌ಹಾಲ್‌ವರೆಗೆ ಶರಣ ಹಡಪದ ಅಪ್ಪಣ್ಣನವರ ಭಾವಚಿತ್ರದ ಮೆರವಣಿಗೆ ನಡೆಯಲಿದೆ. ಸಮಾಜದ ಮುಖಂಡರು, ಯುವಕರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಅವರು ಮನವಿ ಮಾಡಿದ್ದಾರೆ.

ಇದರ ಅಂಗವಾಗಿ ಆ.25ರಂದು ಬೆಳಿಗ್ಗೆ 10 ಗಂಟೆಯಿಂದ ನಗರದ ಬಪ್ಪೂರು ರಸ್ತೆಯಲ್ಲಿರುವ ಹಡಪದ ಅಪ್ಪಣ್ಣನವರ ಸಮುದಾಯ ಭವನದಲ್ಲಿ ರಕ್ತದಾನ ಶಿಬಿರ ಆಯೋಜಿಸಲಾಗಿದೆ ಎಂದು ಭೀಮಣ್ಣ ಬೆಳಗುರ್ಕಿ ತಿಳಿಸಿದ್ದಾರೆ.

## ಈದ್ ಮಿಲಾದ್ ಶಾಂತಿಯುತ ಆಚರಣೆಗೆ ಮನವಿ

ಕೊಟ್ಟೂರು: ಈದ್ ಮಿಲಾದ್ ಹಬ್ಬದ ಅಂಗವಾಗಿ ಪಟ್ಟಣದಲ್ಲಿ ಶಾಂತಿ, ಸೌಹಾರ್ದತೆ ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡುವ ಉದ್ದೇಶದಿಂದ ಕೊಟ್ಟೂರು ಪೊಲೀಸ್ ಠಾಣೆಯಲ್ಲಿ ಪೂರ್ವಭಾವಿ ಸಭೆ ನಡೆಯಿತು.

ಸಭೆಯಲ್ಲಿ ಮಾತನಾಡಿದ ಪೊಲೀಸ್ ಇನ್ಸ್‌ಪೆಕ್ಟರ್ ಡಿ. ದುರುಗಪ್ಪ, ಈದ್ ಮಿಲಾದ್ ಹಬ್ಬವನ್ನು ಶಾಂತಿಯುತ ಹಾಗೂ ಸೌಹಾರ್ದಯುತವಾಗಿ ಆಚರಿಸುವಂತೆ ಸಾರ್ವಜನಿಕರಿಗೆ ಮನವಿ ಮಾಡಿದರು. ಮೆರವಣಿಗೆ ಸೇರಿದಂತೆ ಯಾವುದೇ ಕಾರ್ಯಕ್ರಮ ಆಯೋಜಿಸುವಾಗ ಪೊಲೀಸ್ ಇಲಾಖೆಯ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು ಎಂದು ಸೂಚಿಸಿದರು.

ಹಬ್ಬದ ಸಂದರ್ಭದಲ್ಲಿ ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶ ನೀಡದೆ, ಎಲ್ಲರೂ ಪರಸ್ಪರ ಸಹಕಾರ ಹಾಗೂ ಸಹಬಾಳ್ವೆಯಿಂದ ಹಬ್ಬ ಆಚರಿಸಬೇಕು. ಸಾಮಾಜಿಕ ಜಾಲತಾಣಗಳಲ್ಲಿ ಸುಳ್ಳು, ಪ್ರಚೋದನಕಾರಿ ಅಥವಾ ಸಮಾಜದ ಶಾಂತಿಗೆ ಧಕ್ಕೆ ತರುವ ಸಂದೇಶಗಳನ್ನು ಹರಡದಂತೆ ಎಚ್ಚರಿಕೆ ವಹಿಸಬೇಕು ಎಂದು ಅಧಿಕಾರಿಗಳು ತಿಳಿಸಿದರು.

ಧಾರ್ಮಿಕ ಮುಖಂಡರು ಹಾಗೂ ವಿವಿಧ ಸಂಘಟನೆಗಳ ಪ್ರತಿನಿಧಿಗಳು ಮಾತನಾಡಿ, ಈದ್ ಮಿಲಾದ್ ಹಬ್ಬವನ್ನು ಶಾಂತಿ ಮತ್ತು ಸೌಹಾರ್ದತೆಯಿಂದ ಆಚರಿಸುವುದಾಗಿ ಭರವಸೆ ನೀಡಿದರು. ಸಭೆಯಲ್ಲಿ ಆಯುಬ್ ಖಾನ್, ನೂರುಲ್ಲಾಖಾನ್, ದುರುಗೇಶ್, ಮಲ್ಲಿಕಾರ್ಜುನ, ಜಬಿವುಲ್ಲಾ, ಭಾಷಾ ಸಾಬ್, ಶರೀಫ್ ಸಾಬ್ ಸೇರಿದಂತೆ ವಿವಿಧ ಸಮುದಾಯಗಳ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ಕೀ ತಿರುಗಿಸಿದ ಬಾಲಕ; ಟ್ರ್ಯಾಕ್ಟರ್ ಡಿಕ್ಕಿಗೆ ವ್ಯಕ್ತಿ ಸಾವು



ಹೊಳೇನರಸೀಪುರ: ಹ್ಯಾಂಡ್‌ಬ್ರೇಕ್ ಹಾಕದೆ ಹಾಗೂ ಕೀ ತೆಗೆಯದೆ ರಸ್ತೆಯಲ್ಲಿ ನಿಲ್ಲಿಸಿದ್ದ ಟ್ರ್ಯಾಕ್ಟರ್‌ನ ಕೀ ಅನ್ನು ಬಾಲಕನೊಬ್ಬ ಆಕಸ್ಮಿಕವಾಗಿ ತಿರುಗಿಸಿದ ಪರಿಣಾಮ ಟ್ರ್ಯಾಕ್ಟರ್ ಚಲಿಸಿ ವ್ಯಕ್ತಿಯೊಬ್ಬರಿಗೆ ಡಿಕ್ಕಿ ಹೊಡೆದು ಮೃತಪಟ್ಟ ಘಟನೆ ಪಟ್ಟಣದಲ್ಲಿ ನಡೆದಿದೆ.

ನಗರದ ಗೌಡರ ಬೀದಿಯ ಯಶವಂತ್ (ಹೆಸರು) ಮೃತಪಟ್ಟವರು ಎಂದು ತಿಳಿದುಬಂದಿದೆ. ಮನೆ ನಿರ್ಮಾಣ ಕಾಮಗಾರಿಗೆ ಸೆಂಟರಿಂಗ್ ಸಾಮಗ್ರಿ ತಂದು ಮನೆಯ ಮುಂಭಾಗದ ರಸ್ತೆಯಲ್ಲಿ ಟ್ರ್ಯಾಕ್ಟರ್ ನಿಲ್ಲಿಸಲಾಗಿತ್ತು. ಚಾಲಕ ಹ್ಯಾಂಡ್‌ಬ್ರೇಕ್ ಹಾಕದೆ ಹಾಗೂ ಕೀ ತೆಗೆಯದೆ ಟ್ರ್ಯಾಕ್ಟರ್‌ನಿಂದ ಇಳಿದು ಹೋಗಿದ್ದ ಎನ್ನಲಾಗಿದೆ.

ಈ ವೇಳೆ ಬಾಲಕನೊಬ್ಬ ಟ್ರ್ಯಾಕ್ಟರ್ ಮೇಲೆ ಹತ್ತಿ ಆಟವಾಡುತ್ತಿದ್ದಾಗ ಆಕಸ್ಮಿಕವಾಗಿ ಕೀ ತಿರುಗಿಸಿದ್ದಾನೆ. ಪರಿಣಾಮ ಟ್ರ್ಯಾಕ್ಟರ್ ಮುಂದಕ್ಕೆ ಚಲಿಸಿ ಅಲ್ಲಿದ್ದ ಯಶವಂತ್ ಅವರಿಗೆ ಡಿಕ್ಕಿ ಹೊಡೆದಿದೆ.

ತಲೆ ಹಾಗೂ ಎದೆಗೆ ಗಂಭೀರ ಗಾಯಗೊಂಡ ಅವರನ್ನು ಹೊಳೆನರಸೀಪುರ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ವೈದ್ಯರ ಸಲಹೆಯಂತೆ ಹೆಚ್ಚಿನ ಚಿಕಿತ್ಸೆಗಾಗಿ ಹಾಸನಕ್ಕೆ ಕರೆದೊಯ್ಯುವ ಮಾರ್ಗಮಧ್ಯೆ ಅವರು ಮೃತಪಟ್ಟಿದ್ದಾರೆ.

ಘಟನೆಗೆ ಸಂಬಂಧಿಸಿದಂತೆ ಹೊಳೆನರಸೀಪುರ ನಗರ ಪೊಲೀಸ್ ಠಾಣೆಯಲ್ಲಿ ಟ್ರ್ಯಾಕ್ಟರ್ ಚಾಲಕನ ವಿರುದ್ಧ ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

ಅನಂತ ಜನಶಕ್ತಿ ದಿನ ಪತ್ರಿಕೆಯನ್ನು ಪ್ರೋತ್ಸಾಹಿಸಿ

# ಅಕ್ರಮ ಶೌಚಾಲಯ, ಕಟ್ಟಡಗಳ ಪರಿಶೀಲನೆ

## ದೂರುಗಳ ಹಿನ್ನೆಲೆಯಲ್ಲಿ ಅಧಿಕಾರಿಗಳ ಸ್ಥಳ ಪರಿಶೀಲನೆ



ಜಾಲಹಳ್ಳಿ: ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಅಕ್ರಮವಾಗಿ ನಿರ್ಮಿಸಿರುವ ಶೌಚಾಲಯ ಹಾಗೂ ಕಟ್ಟಡಗಳ ಕುರಿತು ಬಂದ ದೂರುಗಳ ಹಿನ್ನೆಲೆಯಲ್ಲಿ ಜಿಲ್ಲಾ ಪಂಚಾಯಿತಿ ಯೋಜನಾ ನಿರ್ದೇಶಕ ಶರಣ ಬಸವ ಕೆಸರಟ್ಟಿ ಹಾಗೂ ತಾಲ್ಲೂಕು ಪಂಚಾಯಿತಿ ಸಹಾಯಕ ನಿರ್ದೇಶಕ ಅಣ್ಣರಾವ ನಾಯಕ ಅವರು ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಇತ್ತೀಚೆಗೆ ಗ್ರಾಮ ಪಂಚಾಯಿತಿ ಕಚೇರಿಗೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭೇಟಿ ನೀಡಿದ್ದ ಸಂದರ್ಭದಲ್ಲಿ ಸ್ಥಳೀಯ ನಿವಾಸಿ ಶರಣಪ್ಪ ಅವರು ತಮ್ಮ ಮನೆಯ ಮುಂದೆ ಪಕ್ಕದ ಮನೆಯವರು ಅಕ್ರಮವಾಗಿ ಶೌಚಾಲಯ ನಿರ್ಮಿಸಿರುವ ಕುರಿತು ದೂರು ಸಲ್ಲಿಸಿದ್ದರು. ಶೌಚಾಲಯವನ್ನು ತೆರವುಗೊಳಿಸುವಂತೆ ಅವರು ಮನವಿ ಮಾಡಿದ್ದರು.

ಅದೇ ರೀತಿ, ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ವತಿಯಿಂದ ಪಟ್ಟಣದ ರಂಗನಾಥ ಸ್ವಾಮಿ ದೇವಸ್ಥಾನದಿಂದ ಬುಳ್ಳಯ್ಯನ ಕಟ್ಟೆಯವರೆಗಿನ ಮುಖ್ಯ ರಸ್ತೆಯ ಎರಡೂ ಬದಿಯ ಚರಂಡಿಗಳ ಮೇಲೆ ಅಕ್ರಮವಾಗಿ ಕಟ್ಟಡಗಳನ್ನು ನಿರ್ಮಿಸಿರುವ ಕುರಿತು ದೂರು ನೀಡಲಾಗಿತ್ತು. ಜನತಾ ಕಾಲೊನಿಯಲ್ಲಿದ್ದ ಮಹಿಳೆಯರ ಸಾರ್ವಜನಿಕ ಶೌಚಾಲಯವನ್ನು ಅಕ್ರಮವಾಗಿ ತೆರವುಗೊಳಿಸಿರುವ ಬಗ್ಗೆಯೂ ಅಧಿಕಾರಿಗಳಿಗೆ ದೂರು ಸಲ್ಲಿಸಲಾಗಿತ್ತು.

ಈ ಹಿನ್ನೆಲೆಯಲ್ಲಿ ಅಧಿಕಾರಿಗಳು ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ವಾರ್ಡ್ ಸಂಖ್ಯೆ 8ರಲ್ಲಿ ಶರಣಪ್ಪ ಅವರ ಮನೆಯ ಪಕ್ಕದ ನಿವಾಸಿಗಳು ರಸ್ತೆಗೆ ಅಡ್ಡಲಾಗಿ ಶೌಚಾಲಯ ನಿರ್ಮಿಸಿರುವುದು ಮೇಲ್ನೋಟಕ್ಕೆ ಕಂಡುಬಂದಿದೆ. ಸಂಬಂಧಪಟ್ಟ ಮನೆಗಳ ದಾಖಲೆಗಳನ್ನು ಪರಿಶೀಲಿಸಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಮುಖ್ಯ ರಸ್ತೆಯ ಎರಡೂ ಬದಿಯ ಚರಂಡಿಗಳ ಮೇಲೆ ನಿರ್ಮಿಸಿರುವ ಕಟ್ಟಡಗಳು ಹಾಗೂ ಮಹಿಳೆಯರ ಸಾರ್ವಜನಿಕ ಶೌಚಾಲಯ ತೆರವುಗೊಳಿಸಿರುವ ಬಗ್ಗೆಯೂ ಪರಿಶೀಲನೆ ನಡೆಸಲಾಗಿದೆ. ಪರಿಶೀಲನಾ ವರದಿಯನ್ನು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗೆ ಸಲ್ಲಿಸಿದ ಬಳಿಕ ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ತಾಲ್ಲೂಕು ಪಂಚಾಯಿತಿ ಸಹಾಯಕ ನಿರ್ದೇಶಕ ಅಣ್ಣರಾವ ನಾಯಕ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ವೀರೇಶ ನಾಯಕ, ಪಿಡಿಒ ಲಕ್ಷ್ಮಿ ಅಷ್ಟಗಿ, ಕಾರ್ಯದರ್ಶಿ ಅಯ್ಯಪ್ಪ, ಕರ ವಸೂಲಿಗಾರರಾದ ವೆಂಕೋಬ, ಮುದ್ದ ರಂಗಪ್ಪ ನಾಯಕ, ಗ್ರಾಮ ಪಂಚಾಯಿತಿ ಸದಸ್ಯರಾದ ತಿಮ್ಮಣ್ಣ ನಾಯಕ ದಿವಾನ್, ಮಕ್ತೂಮ್ ಪರಾಶಿ ಸೇರಿದಂತೆ ಅಧಿಕಾರಿಗಳು ಹಾಗೂ ಸ್ಥಳೀಯರು ಉಪಸ್ಥಿತರಿದ್ದರು.

## ಬಡ ವ್ಯಾಪಾರಿಗಳ ಮೇಲೆ ಹೆಚ್ಚುವರಿ ಶುಲ್ಕದ ಹೊರೆ ಬೇಡ: ಸೋಮನಾಥ ಪಾಟೀಲ್




ಬೀದರ್: ಬೀದಿ ವ್ಯಾಪಾರಿಗಳಿಂದ ನಗರ ಪಾಲಿಕೆ ವಸೂಲಿ ಮಾಡುತ್ತಿರುವ ಶುಲ್ಕವನ್ನು 20ರಿಂದ 60ಕ್ಕೆ ಹೆಚ್ಚಿಸಿರುವುದನ್ನು ವಿರೋಧಿಸಿ ಬಿಜೆಪಿ ಬೀದರ್ ನಗರ ಘಟಕದ ವತಿಯಿಂದ ಸೋಮವಾರ ಪ್ರತಿಭಟನೆ ನಡೆಯಿತು.

ನಗರದ ಗಣೇಶ್ ಮೈದಾನದಿಂದ ಮಹಾನಗರ ಪಾಲಿಕೆ ಕಚೇರಿವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿದ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು, ಬಳಿಕ ಪಾಲಿಕೆ ಆಯುಕ್ತರಿಗೆ ಮನವಿ ಸಲ್ಲಿಸಿದರು. ಈಗಾಗಲೇ ಆರ್ಥಿಕ ಸಂಕಷ್ಟದಲ್ಲಿರುವ ಸಣ್ಣ ವ್ಯಾಪಾರಿಗಳ ಮೇಲೆ ಹೆಚ್ಚುವರಿ ಶುಲ್ಕದ ಹೊರೆ ಹಾಕಬಾರದು. 60 ಶುಲ್ಕ ವಸೂಲಿ ಮಾಡುವ ಕ್ರಮವನ್ನು ಕೂಡಲೇ ಹಿಂಪಡೆಯಬೇಕು ಎಂದು ಆಗ್ರಹಿಸಿದರು.

ಬಿಜೆಪಿ ಜಿಲ್ಲಾ ಅಧ್ಯಕ್ಷ ಸೋಮನಾಥ ಪಾಟೀಲ್ ಮಾತನಾಡಿ, ಬೀದಿ ವ್ಯಾಪಾರಿಗಳ ಶುಲ್ಕವನ್ನು 20ರಿಂದ 60ಕ್ಕೆ ಏರಿಸಿರುವುದು ಬಡ ವ್ಯಾಪಾರಿಗಳಿಗೆ ಅನ್ಯಾಯವಾಗಿದೆ. ಶುಲ್ಕ ವಸೂಲಿ ಮಾಡುವ ಅಧಿಕಾರ, ಟೆಂಡರ್ ಪ್ರಕ್ರಿಯೆ ಹಾಗೂ ವ್ಯಾಪಾರಿಗಳಿಂದ ವಸೂಲಾಗುತ್ತಿರುವ ಮೊತ್ತದ ಕುರಿತು ನಗರ ಪಾಲಿಕೆ ಅಧಿಕಾರಿಗಳು ಸ್ಪಷ್ಟ ಮಾಹಿತಿ ನೀಡಬೇಕು ಎಂದು ಒತ್ತಾಯಿಸಿದರು.

ಶುಲ್ಕ ವಸೂಲಿಯಲ್ಲಿ ಸಂಪೂರ್ಣ ಪಾರದರ್ಶಕತೆ ಇರಬೇಕು. ವ್ಯಾಪಾರಿಗಳಿಗೆ ಅಧಿಕೃತ ರಸೀದಿ ನೀಡಬೇಕು. ಸಾಧ್ಯವಾದರೆ ಕ್ಯೂಆರ್ ಕೋಡ್ ಮೂಲಕ ಡಿಜಿಟಲ್ ಪಾವತಿ ವ್ಯವಸ್ಥೆ ಜಾರಿಗೆ ತರಬೇಕು ಎಂದು ಅವರು ಹೇಳಿದರು. ಡುಪ್ಲಿಕೇಟ್ ರಸೀದಿ ಮೂಲಕ ಹಣ ವಸೂಲಿ ಮಾಡಲಾಗುತ್ತಿದೆಯೇ ಎಂಬುದನ್ನೂ ಪರಿಶೀಲಿಸಬೇಕು ಎಂದು ಆಗ್ರಹಿಸಿದರು.

ನಗರದ ವಾಕಿಂಗ್ ಸ್ಟ್ರೀಟ್ ಸೇರಿದಂತೆ ವಿವಿಧ ಪ್ರದೇಶಗಳಲ್ಲಿ ಬೀದಿ ವ್ಯಾಪಾರಿಗಳಿಗೆ ಸೂಕ್ತ ಸ್ಥಳಾವಕಾಶ ಕಲ್ಪಿಸಬೇಕು. ವಾಹನ ಸಂಚಾರ-ಕ್ಕೆ ತೊಂದರೆಯಾಗದಂತೆ ವ್ಯಾಪಾರ ವ್ಯವಸ್ಥೆಯನ್ನು ಸಮರ್ಪಕವಾಗಿ ನಿಯಂತ್ರಿಸುವುದರ ಜೊತೆಗೆ ವ್ಯಾಪಾರಿಗಳ ಜೀವನೋಪಾಯಕ್ಕೂ ರಕ್ಷಣೆ ನೀಡಬೇಕು ಎಂದು ಬಿಜೆಪಿ ಮುಖಂಡರು ಒತ್ತಾಯಿಸಿದರು.

ಬೀದಿ ವ್ಯಾಪಾರಿಗಳ ಮೇಲಿನ ಹೆಚ್ಚುವರಿ ಶುಲ್ಕ ಹಿಂಪಡೆಯುವುದು, ಟೆಂಡರ್ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಹಾಗೂ ಬಡವರಿಗೆ ವಸತಿ ಕಲ್ಪಿಸುವ ಬೇಡಿಕೆಗಳನ್ನು ಈಡೇರಿಸದಿದ್ದರೆ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಪ್ರತಿಭಟನಾಕಾರರು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಈಶ್ವರ್‌ಸಿಂಗ ಠಾಕೂರ, ಸುಭಾಷ್ ಮಡಿವಾಳ, ಗಣೇಶ್ ಭೋಸಲೇ, ಬಾಬು ಮಲ್ಕಾಪೂರೆ, ರೋಷನ್ ವರ್ಮಾ, ಪೀರಪ್ಪ ಔರಾದೆ ಸೇರಿದಂತೆ ಬಿಜೆಪಿ ಮುಖಂಡರು, ಕಾರ್ಯಕರ್ತರು ಹಾಗೂ ಬೀದಿ ವ್ಯಾಪಾರಿಗಳು ಉಪಸ್ಥಿತರಿದ್ದರು.

# ನಾಗೇಂದ್ರ ರಾಜೀನಾಮೆಗೆ ಆಗ್ರಹ: ಸೆ.1ರಿಂದ ಬಿಜೆಪಿ 'ಬಳ್ಳಾರಿ ಚಲೋ'

## ಸೆ. 1 ರಿಂದ 10 ರವರೆಗೆ ಕಾಲ್ನಡಿಗೆ | ಗುರಗುಂಟದಿಂದ ಆರಂಭ, ಬಳ್ಳಾರಿಯಲ್ಲಿ ಸಮಾರೋಪ ಕಾರ್ಯಕ್ರಮ

ಬೆಂಗಳೂರು: ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಬಹುಕೋಟಿ ಹಗರಣದಲ್ಲಿ ಭಾಗಿಯಾಗಿರುವ ಆರೋಪ ಹೊತ್ತಿರುವ ಸಚಿವ ಬಿ. ನಾಗೇಂದ್ರ (ಃ ಓಚಿ-ರಜಟಿಜಡಿಚಿ) ಅವರ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ಸೆ.1 ರಿಂದ 10 ದಿನಗಳ ಕಾಲ ಬಳ್ಳಾರಿ ಚಲೋ ಪಾದಯಾತ್ರೆ ಘೋಷಣೆ ಮಾಡಿದೆ.

ಬಿಜೆಪಿ ಕಚೇರಿಯಲ್ಲಿ ರಾಜ್ಯಾಧ್ಯಕ್ಷ ಬಿ. ವೈ. ವಿಜಯೇಂದ್ರ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್, ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಮಾಜಿ ಸಚಿವರಾದ ಜಿ. ಜನಾರ್ದನ ರೆಡ್ಡಿ, ಬಿ. ಶ್ರೀರಾಮುಲು, ಸಿ. ಟಿ. ರವಿ ಹಾಗೂ ರಾಜುಗೌಡ ಅವರ ಉಪಸ್ಥಿತಿಯಲ್ಲಿ ನಡೆದ ಜಂಟಿ ಸುದ್ದಿಗೋಷ್ಠಿಯಲ್ಲಿ ಈ ಮಹತ್ವದ ನಿರ್ಧಾರ ಪ್ರಕಟಿಸಲಾಯಿತು.

ಸೆಪ್ಟೆಂಬರ್ 1 ರಿಂದ 10 ರವರೆಗೆ ಒಟ್ಟು 10 ದಿನಗಳ ಕಾಲ ರಾಯಚೂರಿನಿಂದ ಬಳ್ಳಾರಿಯವರೆಗೆ ಸುಮಾರು 170 ಕಿ.ಮೀ. ಪಾದಯಾತ್ರೆ ನಡೆಯಲಿದೆ. ಲಿಂಗಸುಗೂರು ಕ್ಷೇತ್ರದ ಗುರಗುಂಟದಿಂದ ಆರಂಭವಾಗುವ ಯಾತ್ರೆಯು ಲಿಂಗಸುಗೂರು (21 ಕಿ.ಮೀ), ಮಸ್ಕಿ (30 ಕಿ.ಮೀ), ಸಿಂಧನೂರು (30 ಕಿ.ಮೀ), ಶಿರಗುಪ್ಪ (31 ಕಿ.ಮೀ), ತೆಕ್ಕಲಕೋಟೆ (11 ಕಿ.ಮೀ), ಸಿಂದಗೇರಿ (20 ಕಿ.ಮೀ) ಮಾರ್ಗವಾಗಿ ಬಳ್ಳಾರಿಯನ್ನು (27 ಕಿ.ಮೀ) ತಲುಪಲಿದೆ.

ಪಾದಯಾತ್ರೆಗೆ ಜೆಡಿಎಸ್ ಸಂಪೂರ್ಣ ಬೆಂಬಲ ಸೂಚಿಸಿದೆ. ಉದ್ಘಾಟನಾ ಸಮಾರಂಭಕ್ಕೆ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಹಾಗೂ ಹೆಚ್. ಡಿ. ಕುಮಾರಸ್ವಾಮಿ ಆಗಮಿಸಲಿದ್ದು, ಬಳ್ಳಾರಿಯಲ್ಲಿ ನಡೆಯಲಿರುವ ಬೃಹತ್ ಸಮಾರೋಪ ಸಮಾವೇಶದಲ್ಲಿ ಕೇಂದ್ರದ ಪ್ರಮುಖ ಸಚಿವರು ಪಾಲ್ಗೊಳ್ಳಲಿದ್ದಾರೆ.

ವಿಜಯೇಂದ್ರ ಮಾತನಾಡಿ, ವಾಲ್ಮೀಕಿ ನಿಗಮದ ಅಕ್ರಮವನ್ನು ಸಿದ್ದರಾಮಯ್ಯ ಹಾಗೂ ಸಚಿವ ಶಿವಲಿಂಗೇಗೌಡ ಅವರೇ ಸದನದಲ್ಲಿ ಒಪ್ಪಿಕೊಂಡಿದ್ದಾರೆ. ಇಷ್ಟಾದರೂ ಮುಖ್ಯ ಆರೋಪಿಯಾಗಿರುವ ನಾಗೇಂದ್ರ ಅವರಿಂದ ರಾಜೀನಾಮೆ ಪಡೆಯದೇ ಸರ್ಕಾರ ರಕ್ಷಣೆ ಮಾಡುತ್ತಿದೆ. ಅಧಿವೇಶನದಲ್ಲಿ ಸತ್ಯ ಎದುರಿಸಲಾಗದೆ ಸರ್ಕಾರ ಕಲಾಪವನ್ನು ಮೊಟಕುಗೊಳಿಸಿ ಪಲಾಯನ ಮಾಡಿದೆ ಎಂದು ಆಕ್ರೋಶ ಹೊರಹಾಕಿದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಧಿಕಾರ ಸ್ವೀಕರಿಸಿದಾಗ ಇದ್ದ ಉತ್ಸಾಹ ಈಗ ಕಳೆಗುಂದಿದೆ. ಸಂಪುಟ ವಿಸ್ತರಣೆಯ ಗೊಂದಲ, ಖಾತೆ ಹಂಚಿಕೆಯ ಹಗ್ಗಜಗ್ಗಾಟ ಹಾಗೂ ಸಿದ್ದರಾಮಯ್ಯ ಅವರ ಅಸಮಾಧಾನಗಳಲ್ಲೇ ಸಮಯ ಕಳೆಯುತ್ತಿದ್ದು, ಸರ್ಕಾರ ಇನ್ನೂ ಟೇಕಾಫ್ ಆಗಿಯೇ ಇಲ್ಲ ಎಂದು ದೂರಿದರು.

ಬಡವರ ಕಲ್ಯಾಣ ಮತ್ತು ಯುವಕರಿಗೆ ಉದ್ಯೋಗ ನೀಡುವುದು ಸರ್ಕಾರದ ಆದ್ಯತೆಯಾಗಿಲ್ಲ. ಬದಲಿಗೆ ಪಾರ್ಕ್‌ಗಳ ಜಮೀನು ನುಂಗುವುದು, ಬಿಡದಿ ಟೌನ್‌ಶಿಪ್, ಕನಕಪುರ ಏರ್‌ಪೋರ್ಟ್ ಮತ್ತು ನೈಸ್ ಯೋಜನೆಯನ್ನು ಸ್ವಾಧೀನಪಡಿಸಿಕೊಳ್ಳುವ ರಿಯಲ್ ಎಸ್ಟೇಟ್ ಯೋಜನೆಗಳಲ್ಲೇ ಆಡಳಿತ ಮುಳುಗಿದೆ ಎಂದು ಆಕ್ರೋಶ ಹೊರಹಾಕಿದರು.

ಬಿಜೆಪಿ ಸರ್ಕಾರ ವಾಲ್ಮೀಕಿ ಸಮುದಾಯಕ್ಕೆ ನೀಡಿದ್ದ ಶೇ.7ರ ಮೀಸಲಾತಿಯನ್ನು ಪ್ರಸ್ತುತ ಸರ್ಕಾರ ಶೇ.3ಕ್ಕೆ ಇಳಿಸಿ ಅನ್ಯಾಯ ಮಾಡಿದೆ. ಉತ್ತರ ಕರ್ನಾಟಕದ ಅಭಿವೃದ್ಧಿ ಕಡೆಗಣನೆ ಸೇರಿದಂತೆ ಸರ್ಕಾರದ ಎಲ್ಲಾ ವೈಫಲ್ಯಗಳನ್ನು ಜನರ ಮುಂದಿಟ್ಟು ಬೀದಿಗಿಳಿದು ಹೋರಾಟ ನಡೆಸಲಿದ್ದೇವೆ ಎಂದು ಹೇಳಿದರು.




EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.